ಸಂಪುಟ : 11 ಸಂಚಿಕೆ: 54 ಪುಟ : 4+2 ಬೆಲೆ: 3.00 ರವಿವಾರ ಮಾರ್ಚ್ 29 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್


# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ

Volume : 11 Issue : 54 Pages : 4+2 Price : 3.00 Sunday March 29 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




## ಮಾ. 31ರಂದು ಡಿ.ಆರ್. ಪಾಟೀಲರಿಗೆ ಸಂಯಮ ಪ್ರಶಸ್ತಿ ಪ್ರದಾನ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ ವತಿಯಿಂದ 2023, 2024 ಹಾಗೂ 2025ನೇ ಸಾಲಿನ "ಸಂಯಮ ಪ್ರಶಸ್ತಿ" ಪ್ರದಾನ ಸಮಾರಂಭವನ್ನು ಮಾರ್ಚ್ 31ರಂದು ಬೆಳಿಗ್ಗೆ 11ಕ್ಕೆ ಬೆಂಗಳೂರಿನ ಕುಮಾರಪಾರ್ಕ್‌ನ ಗಾಂಧೀಭವನದ ಮಹಾದೇವ ದೇಸಾಯಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಈ ಸಮಾರಂಭದಲ್ಲಿ ಮಾಜಿ ಶಾಸಕರು, ಕರ್ನಾಟಕ ರಾಜ್ಯ ಯೋಜನೆ ಹಾಗೂ ಅಭಿವೃದ್ಧಿ ಸಮಿತಿ ಉಪಾಧ್ಯಕ್ಷರು ಹಾಗೂ ಸಂತ ರಾಜಕಾರಣಿ ಎಂದೇ ಖ್ಯಾತರಾಗಿರುವ ಡಿ.ಆರ್. ಪಾಟೀಲ ಅವರಿಗೆ 2023ನೇ ಸಾಲಿನ "ಸಂಯಮ ಪ್ರಶಸ್ತಿ" ಪ್ರದಾನ ಜರುಗಲಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರಶಸ್ತಿ ಪ್ರದಾನ ಮಾಡಲಿದ್ದು, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ, ಕೇಂದ್ರ ಸಚಿವರಾದ ನಿರ್ಮಲಾ ಸೀತಾರಾಮನ್ ಹಾಗೂ ಶೋಭಾ ಕರಂದ್ಲಾಜೆ ಅವರು ಘನ ಉಪಸ್ಥಿತಿ ವಹಿಸಲಿದ್ದಾರೆ. ಶಾಸಕ ರಿಜ್ವಾನ್ ಅರ್ಷದ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ, ಸಚಿವರಾದ ಶರಣಬಸಪ್ಪಗೌಡ ದರ್ಶನಾಪುರ, ಪ್ರಿಯಾಂಕ್ ಖರ್ಗೆ, ಎಸ್.ಎಸ್. ಬೋಸರಾಜು ಹಾಗೂ ಡಾ. ಶರಣಪ್ರಕಾಶ ಪಾಟೀಲ ಪಾಲ್ಗೊಳ್ಳಲಿದ್ದಾರೆ.

ಇದೇ ಸಂದರ್ಭದಲ್ಲಿ 2024ನೇ ಸಾಲಿನ ಸಂಯಮ ಪ್ರಶಸ್ತಿಯನ್ನು ಬಿ.ಆರ್. ಪಾಟೀಲ ಅವರಿಗೆ ಹಾಗೂ 2025ನೇ ಸಾಲಿನ ಸಂಯಮ ಪ್ರಶಸ್ತಿಯನ್ನು ಡಾ. ವುಡೇಪಿ ಕೃಷ್ಣ ಅವರಿಗೆ ಪ್ರದಾನ ಮಾಡಲಾಗುತ್ತದೆ.

ಡಿ.ಆರ್. ಪಾಟೀಲ ಅಭಿಮಾನಿ ಬಳಗದವರು ಹೆಚ್ಚಿನ ಸಂಖ್ಯೆಯಲ್ಲಿ ಈ ಸಮಾರಂಭದಲ್ಲಿ ಪಾಲ್ಗೊಳ್ಳುವಂತೆ ವಾಸಣ್ಣ ಕುರುಡುಗಿ, ಗುರಣ್ಣ ಬಳಗಾನೂರ, ವಿದ್ಯಾಧರ ದೊಡ್ಡಮನಿ, ಜೆ.ಕೆ. ಜಮಾದಾರ ಸೇರಿದಂತೆ ಇತರರು ವಿನಂತಿಸಿದ್ದಾರೆ.

### ಸಫಾಯಿ ಕರ್ಮಚಾರಿ ಸಮಿತಿ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯಲ್ಲಿ ಡಿಸಿ ಶ್ರೀಧರ್

# ಕರ್ಮಚಾರಿಗಳ ಕಲ್ಯಾಣಕ್ಕೆ ಆದ್ಯತೆ



"ಸಫಾಯಿ ಕರ್ಮಚಾರಿಗಳ ಕಲ್ಯಾಣ ಮತ್ತು ಭದ್ರತೆ ಖಚಿತಪಡಿಸುವುದು ನಮ್ಮ ಪ್ರಮುಖ ಜವಾಬ್ದಾರಿ"
– ಸಿ.ಎನ್. ಶ್ರೀಧರ, ಜಿಲ್ಲಾಧಿಕಾರಿ.

ಸಭೆಯಲ್ಲಿ ಸಫಾಯಿ ಕರ್ಮಚಾರಿಗಳ ಕ್ಷೇಮಾಭಿವೃದ್ಧಿ, ಆರೋಗ್ಯ ತಪಾಸಣೆ, ವೇತನ ಪಾವತಿ ಹಾಗೂ ಸರ್ಕಾರದ ಸೌಲಭ್ಯಗಳ ಅನುಷ್ಠಾನದ ಕುರಿತು ಸುದೀರ್ಘ ಚರ್ಚೆ ನಡೆಯಿತು. ಕರ್ಮಚಾರಿಗಳು ಎದುರಿಸುತ್ತಿರುವ ಸವಾಲುಗಳು, ವೇತನ ವಿಳಂಬ, ಆರೋಗ್ಯ ಸುರಕ್ಷತೆ ಹಾಗೂ ವಿವಿಧ ಯೋಜನೆಗಳ ಜಾರಿಗೆ ಸಂಬಂಧಿಸಿದ ವಿಚಾರಗಳನ್ನೂ ಪರಿಶೀಲಿಸಲಾಯಿತು.

■ವಿಜಯಸಾಕ್ಷಿ ಸುದ್ದಿ, ಗದಗ

ಸಮಾಜದ ನೈರ್ಮಲ್ಯ ಕಾಪಾಡುವಲ್ಲಿ ಸಫಾಯಿ ಕರ್ಮಚಾರಿಗಳ ಸೇವೆ ಅತ್ಯಮೂಲ್ಯವಾದದ್ದು. ಅವರ ಶ್ರಮಕ್ಕೆ ಗೌರವ ನೀಡುವುದು ಹಾಗೂ ಸಾಮಾಜಿಕ ಭದ್ರತೆಯನ್ನು ಖಚಿತಪಡಿಸುವುದು ಆಡಳಿತದ ಆದ್ಯತೆಯಾಗಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ನಡೆದ ಸಫಾಯಿ ಕರ್ಮಚಾರಿ ಸಮಿತಿ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಫಾಯಿ ಕರ್ಮಚಾರಿಗಳಿಗೆ ನಿಯಮಿತವಾಗಿ ಉಚಿತ ಆರೋಗ್ಯ ತಪಾಸಣಾ ಶಿಬಿರಗಳನ್ನು ಆಯೋಜಿಸುವುದು ಹಾಗೂ ಅಗತ್ಯ ವೈದ್ಯಕೀಯ ಕಿಟ್‌ಗಳನ್ನು ವಿತರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು. ಜೊತೆಗೆ ಗ್ಲೌಸ್, ಮಾಸ್ಕ್, ಬೂಟು ಹಾಗೂ ಸಮವಸ್ತ್ರಗಳಂತಹ ಆಧುನಿಕ ಸುರಕ್ಷತಾ ಪರಿಕರಗಳನ್ನು ವಿಳಂಬವಿಲ್ಲದೆ ಒದಗಿಸಲು ಸೂಚಿಸಿದರು. ಕರ್ಮಚಾರಿಗಳ ಮಕ್ಕಳ ಶಿಕ್ಷಣಕ್ಕಾಗಿ ವಿದ್ಯಾರ್ಥಿವೇತನ ಹಾಗೂ ವಸತಿ ಯೋಜನೆಗಳ ಅಡಿಯಲ್ಲಿ ಬಾಕಿ ಇರುವ ಅರ್ಜಿಗಳನ್ನು ಶೀಘ್ರ ವಿಲೇವಾರಿ ಮಾಡಲು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಕರ್ಮಚಾರಿಗಳ ಮಾಸಿಕ ವೇತನವನ್ನು ನಿಗದಿತ ಸಮಯದಲ್ಲಿ ಬ್ಯಾಂಕ್ ಖಾತೆಗಳಿಗೆ ಜಮಾ ಮಾಡುವುದರ ಜೊತೆಗೆ ವಿಮಾ ಸೌಲಭ್ಯವನ್ನು ಖಚಿತಪಡಿಸುವ ಬಗ್ಗೆ ಚರ್ಚಿಸಲಾಯಿತು.

ಯಾವುದೇ ಸಮಸ್ಯೆಗಳಿದ್ದರೆ ಕರ್ಮಚಾರಿಗಳು ನೇರವಾಗಿ ಅಧಿಕಾರಿಗಳ ಗಮನಕ್ಕೆ ತರಬಹುದು ಎಂದು ತಿಳಿಸಿದ ಜಿಲ್ಲಾಧಿಕಾರಿಗಳು, ವಸತಿ ಯೋಜನೆಗಳ ಅಡಿಯಲ್ಲಿ ಬಾಕಿ ಇರುವ ಅರ್ಜಿಗಳನ್ನು ಶೀಘ್ರವಾಗಿ ವಿಲೇವಾರಿ ಮಾಡಿ ಅರ್ಹರಿಗೆ ಮನೆಗಳನ್ನು ಒದಗಿಸಲು ಆದ್ಯತೆ ನೀಡಲಾಗುವುದು ಎಂದು ಹೇಳಿದರು. ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ. ನಂದಾ ಹಣಬರಟ್ಟಿ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಸಫಾಯಿ ಕರ್ಮಚಾರಿಗಳ ಸಂಘದ ನಾಮನಿರ್ದೇಶಿತ ಸದಸ್ಯರಾದ ಎಸ್.ಎನ್. ಬಳ್ಳಾರಿ, ಬಿಳೆಯಲಿ, ಶರಣಪ್ಪ ಮೂಕಪ್ಪ ಪೂಜಾರ, ಶ್ರೀಮತಿ ರೇಣುಕಾ ಸು. ದೊಡ್ಡಮನಿ, ಶ್ರೀಮತಿ ಅಂಜನಾದೇವಿ ಎಂ. ಮ್ಯಾಗೇರಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

### ಹಗರಿಬೊಮ್ಮನಹಳ್ಳಿಯಲ್ಲಿ ಮಹಿಳಾ ದಿನಾಚರಣೆ – ಸಾಧಕರಿಗೆ ಸನ್ಮಾನ

# ಮಹಿಳಾ ಸಬಲೀಕರಣಕ್ಕೆ ಅಂಬೇಡ್ಕರ್ ಕೊಡುಗೆ ಅಪಾರ!




"ಮಹಿಳೆಯರು ಎಲ್ಲ ಕ್ಷೇತ್ರಗಳಲ್ಲಿ ಸಮಾನವಾಗಿ ಮುಂದುವರೆಯಲು ಅಂಬೇಡ್ಕರ್ ಕೊಟ್ಟ ಹಕ್ಕುಗಳೇ ಬಲವಾಗಿವೆ"
– ವೀಣಾ ಮಾಂತೇಶ್,

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಮಹಿಳೆಯರಿಗೆ ಸ್ವಾತಂತ್ರ್ಯ ಹಾಗೂ ಹಕ್ಕುಗಳನ್ನು ನೀಡಿದ ಮಹಾನ್ ವ್ಯಕ್ತಿ ಡಾ. ಬಿ.ಆರ್. ಅಂಬೇಡ್ಕರ್ ಎಂದು ಎಂಪಿ ಪ್ರಕಾಶ್ ಸಮಾಜಮುಖಿ ಟ್ರಸ್ಟ್ ಮುಖ್ಯಸ್ಥರಾದ ಶ್ರೀಮತಿ ವೀಣಾ ಮಾಂತೇಶ್ ಹೇಳಿದರು.

ಪಟ್ಟಣದ ಮೀನಾಕ್ಷಿ ಬಸಪ್ಪ ಕಾಂಪ್ಲೆಕ್ಸ್‌ನಲ್ಲಿ ಎಬಿಎಸ್ ಡ್ರೀಮ್ ಇಂಡಿಯಾ ಗ್ರೂಪ್ಸ್ ವತಿಯಿಂದ ಆಯೋಜಿಸಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಹಾಗೂ ಸಾಧಕ ಮಹಿಳೆಯರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಹಿಂದಿನ ಕಾಲದಲ್ಲಿ ಮಹಿಳೆಯರನ್ನು ಮನೆಗೆ ಮಾತ್ರ ಸೀಮಿತಗೊಳಿಸಲಾಗುತ್ತಿತ್ತು. ಆದರೆ ಡಾ. ಅಂಬೇಡ್ಕರ್ ಅವರು ಮಹಿಳೆಯರಿಗೆ ಮತದಾನದ ಹಕ್ಕು ನೀಡುವ ಮೂಲಕ ಸಮಾನತೆಯ ದಾರಿ ತೆರೆದರು. ಇಂದಿಗೂ ಅವರನ್ನು ಸ್ಮರಿಸುವುದು ನಮ್ಮ ಕರ್ತವ್ಯವಾಗಿದೆ ಎಂದು ಹೇಳಿದರು.

ಇನ್ಫೋಸಿಸ್ ಸಂಸ್ಥೆಯ ಮುಖ್ಯಸ್ಥರಾದ ಶ್ರೀಮತಿ ಸುಧಾ ಮೂರ್ತಿ ಅವರ ಸಾಧನೆಯನ್ನು ಉಲ್ಲೇಖಿಸಿದ ಅವರು, ಮಹಿಳೆಯರು ಎಲ್ಲ ಕ್ಷೇತ್ರಗಳಲ್ಲೂ ಮುಂದಿರುತ್ತಿದ್ದಾರೆ. ಭಾರತದಲ್ಲಿ ಮಹಿಳಾ ಪೈಲಟ್‌ಗಳ ಸಂಖ್ಯೆ ಹೆಚ್ಚಿರುವುದು ಹೆಮ್ಮೆಯ ವಿಷಯ ಎಂದು ಹೇಳಿದರು. ಮಹಿಳೆಯರಿಗೆ ನೀಡಿರುವ ಶೇ.33 ಮೀಸಲಾತಿಯನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಪ್ರಸ್ತಾವಿಕವಾಗಿ ಮಾತನಾಡಿದ ಶ್ರೀಮತಿ ಶಂಷಾದ್ ಬೇಗಂ ಅವರು, ಮಹಿಳೆಯರು ಲಭಿಸಿರುವ ಅವಕಾಶಗಳನ್ನು ಸಮರ್ಪಕವಾಗಿ ಬಳಸಿಕೊಂಡು ಗಂಡು–ಹೆಣ್ಣು ಭೇದಭಾವವನ್ನು ತೊಲಗಿಸಬೇಕು ಎಂದು ಹೇಳಿದರು. ಕುಟುಂಬದಲ್ಲಿ ಪರಸ್ಪರ ಗೌರವದ ಮನೋಭಾವ ಬೆಳೆಸುವ ಅಗತ್ಯವಿದೆ ಎಂದರು.

ಈ ಸಂದರ್ಭದಲ್ಲಿ ಎಬಿಎಸ್ ಡ್ರೀಮ್ ಇಂಡಿಯಾ ಗ್ರೂಪ್ ವತಿಯಿಂದ ಪದ್ಮಶ್ರೀ ಪುರಸ್ಕೃತ ಜನಪದ ಕಲಾವಿದೆ ಶ್ರೀಮತಿ ಮಂಜಮ್ಮ ಜೋಗತಿ ಅವರ ತಂಡದವರಿಗೆ ಗೌರವ ನೀಡಲಾಯಿತು.

ಪುರಸಭೆ, ಗ್ರಾಮ ಪಂಚಾಯಿತಿ, ಶಿಕ್ಷಣ, ಆರೋಗ್ಯ, ಪೊಲೀಸ್ ಹಾಗೂ ಇತರ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಮಹಿಳೆಯರನ್ನು ಸನ್ಮಾನಿಸಿ ಗೌರವಿಸಲಾಯಿತು. ಸಂಗೀತ ಶಿಕ್ಷಕಿ ಶಾರದಮ್ಮ ಸೇರಿದಂತೆ ಸ್ವಾವಲಂಬಿ ಜೀವನ ಕಟ್ಟಿಕೊಂಡ ಮಹಿಳೆಯರ ಸಾಧನೆಯನ್ನು ಗುರುತಿಸಲಾಯಿತು.

ಕಾರ್ಯಕ್ರಮದಲ್ಲಿ ಶ್ರೀಮತಿ ಗಂಗಾ (ಎಂಬಿಬಿಎಸ್ ವೈದ್ಯರು, ಪ್ರಾಥಮಿಕ ಆರೋಗ್ಯ ಕೇಂದ್ರ), ಶ್ರೀಮತಿ ಜಿ. ಸರೋಜಾ (ಅಧ್ಯಕ್ಷರು, ಪರಿವರ್ತನಾ ಚಾರಿಟೇಬಲ್ ಟ್ರಸ್ಟ್), ಮಾಬುನಿ, ನಾಗಲಕ್ಷ್ಮಿ, ನಿರೂಪಕಿ ಶಾಹಿರಾ, ಅಶ್ವಿನಿ ಹಾಗೂ ಎಬಿಎಸ್ ಗ್ರೂಪ್ ಸದಸ್ಯರು ಸೇರಿದಂತೆ ಅನೇಕ ಮಹಿಳೆಯರು ಭಾಗವಹಿಸಿದರು.

## ತೋಂಟದ ಶ್ರೀಗಳ ನೇತೃತ್ವದಲ್ಲಿ ವ್ಯಸನಮುಕ್ತ ಸಂಕಲ್ಪ ಪಾದಯಾತ್ರೆ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಜ. ತೋಂಟದಾರ್ಯ ಜಾತ್ರಾ ಮಹೋತ್ಸವದ ಅಂಗವಾಗಿ ವ್ಯಸನಮುಕ್ತ ಸಮಾಜ ನಿರ್ಮಾಣಕ್ಕಾಗಿ ವಿಶೇಷ ಜಾಗೃತಿ ಪಾದಯಾತ್ರೆಯನ್ನು ಒಕ್ಕಲಗೇರಿಯಲ್ಲಿ ನಡೆಸಲಾಯಿತು.

ನಗರದ ಒಕ್ಕಲಗೇರಿಯ ರಾಚೋಟೇಶ್ವರ ದೇವಸ್ಥಾನದಿಂದ ಜ.ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳವರಿಂದ ಪಾದಯಾತ್ರೆಗೆ ಚಾಲನೆ ನೀಡಲಾಯಿತು. ಓಣಿಯ ಪ್ರಮುಖ ರಸ್ತೆಗಳಲ್ಲಿ ಸಾಗಿದ ಈ ಪಾದಯಾತ್ರೆ ಜನರಲ್ಲಿ ವ್ಯಸನ ವಿರೋಧಿ ಅರಿವು ಮೂಡಿಸುವ ಪ್ರಮುಖ ಪ್ರಯತ್ನವಾಗಿ ಗಮನಸೆಳೆಯಿತು.

ಪಾದಯಾತ್ರೆಯ ವಿಶೇಷತೆ ಎಂದರೆ, ಓಣಿಯ ನಾಗರಿಕರು ಸ್ವಯಂಪ್ರೇರಿತವಾಗಿ ತಮ್ಮ ದುಷ್ಚಟಗಳನ್ನು ತ್ಯಜಿಸುವ ಸಂಕಲ್ಪ ಕೈಗೊಂಡರು. ಮದ್ಯದ ಪ್ಯಾಕೆಟ್‌ಗಳು, ಗುಟ್ಕಾ ಹಾಗೂ ತಂಬಾಕು ಉತ್ಪನ್ನಗಳನ್ನು ಶ್ರೀಗಳ ಜೋಳಿಗೆಯಲ್ಲಿ ಹಾಕಿ, ಇನ್ಮುಂದೆ ಇಂತಹ ವ್ಯಸನಗಳಿಂದ ದೂರವಿದ್ದು ಆರೋಗ್ಯಕರ ಬದುಕು ನಡೆಸುವುದಾಗಿ ಪ್ರಮಾಣ ಮಾಡಿ ಶ್ರೀಗಳಿಂದ ಆಶೀರ್ವಾದ ಪಡೆದರು.

ಈ ಸಂದರ್ಭದಲ್ಲಿ ಸಿರಸಂಗಿ ಮಹಾಲಿಂಗೇಶ್ವರ ಶ್ರೀಮಠದ ಪೂಜ್ಯಶ್ರೀ ಬಸವಮಹಾಂತ ಸ್ವಾಮಿಗಳು, ಬೈರನಹಟ್ಟಿಯ ಪೂಜ್ಯಶ್ರೀ ಶಾಂತಲಿಂಗ ಮಹಾಸ್ವಾಮಿಗಳು ಸೇರಿದಂತೆ ಹಲವಾರು ಗಣ್ಯರು ಭಾಗವಹಿಸಿ ಕಾರ್ಯಕ್ರಮಕ್ಕೆ ಮತ್ತಷ್ಟು ಮೆರುಗು ತಂದರು.

ಓಣಿಯ ಹಿರಿಯರಾದ ಕೊಟ್ರಪ್ಪ ಕಮತರ್, ಎಂ.ಎ. ಹಿರೇಮಠ, ಅನಿಲ್ ಮೇಲಗೇರಿ, ಶಿವಕುಮಾರಗೌಡ ಪಾಟೀಲ, ಆಂಜನೇಯ ಕಟಗಿ ಸೇರಿದಂತೆ ಜಾತ್ರಾ ಮಹೋತ್ಸವದ ಅಧ್ಯಕ್ಷರಾದ ವಿನಾಯಕ ಮಾನ್ವಿ, ಕಾರ್ಯದರ್ಶಿ ಚೇತನ ಅಂಗಡಿ, ಉಪಾಧ್ಯಕ್ಷ ಶಿವಯ್ಯ ನಾಲ್ವತ್‌ವಾಡಮಠ, ಸುಭಾಷ ಚಂದಪ್ಪನವರ, ಎಂ.ಜಿ. ಹೂಗಾರ, ಚಂದ್ರಶೇಖರ ರಾಜೂರು, ಎಸ್.ವಿ. ಪವಾಡಿಗೌಡ್ರ, ಉಮೇಶಗೌಡ್ರ ಪಾಟೀಲ, ಯಲ್ಲೋಸಾ ಹಬೀಬ್, ವಿರುಪಾಕ್ಷಪ್ಪ ದಲಾಲಿ, ಈರಣ್ಣ ಗಡಗಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಈ ಪಾದಯಾತ್ರೆ ಸಮಾಜದಲ್ಲಿ ಉತ್ತಮ ಬದಲಾವಣೆಗೆ ದಾರಿ ತೋರಿಸುವ ಉದ್ದೇಶದಿಂದ ಯಶಸ್ವಿಯಾಗಿ ನೆರವೇರಿತು.

## ಅಪರಾಧ ಪತ್ತೆಯಲ್ಲಿ ನಿಪುಣತೆ: ಜಾಫರ್ ಬಚ್ಚೇರಿಗೆ ಸಿಎಂ ಪದಕ



■ವಿಜಯಸಾಕ್ಷಿ ಸುದ್ದಿ, ಗದಗ

ಅಪರಾಧ ಪತ್ತೆ ಕಾರ್ಯದಲ್ಲಿ ಅತ್ಯುತ್ತಮ ಸಾಧನೆ ತೋರಿದ ಹಿನ್ನೆಲೆಯಲ್ಲಿ ಗದಗ ಜಿಲ್ಲೆಯ ಮುಂಡರಗಿ ಪೊಲೀಸ್ ಠಾಣೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹೆಡ್ ಕಾನ್ಸ್‌ಟೇಬಲ್ ಜಾಫರ್ ಬಚ್ಚೇರಿ ಅವರು 2025ನೇ ಸಾಲಿನ ಪ್ರತಿಷ್ಠಿತ ಮುಖ್ಯಮಂತ್ರಿಗಳ ಪದಕಕ್ಕೆ ಭಾಜನರಾಗಿರುವುದು ಜಿಲ್ಲೆಗೆ ಹೆಮ್ಮೆಯ ಸಂಗತಿಯಾಗಿದೆ.

ಸುಮಾರು ಹದಿನಾಲ್ಕು ವರ್ಷಗಳಿಂದ ಪೊಲೀಸ್ ಇಲಾಖೆಯ ಅಪರಾಧ ಪತ್ತೆ ವಿಭಾಗದಲ್ಲಿ ಸೇವೆ ಸಲ್ಲಿಸುತ್ತಿರುವ ಜಾಫರ್ ಬಚ್ಚೇರಿ ಅವರು ತಮ್ಮ ಕರ್ತವ್ಯನಿಷ್ಠೆ, ಚಾತುರ್ಯ ಹಾಗೂ ಚಾಣಾಕ್ಷ ನಿರ್ಧಾರ ಸಾಮರ್ಥ್ಯದಿಂದ ಅನೇಕ ಕ್ಲಿಷ್ಟ ಪ್ರಕರಣಗಳನ್ನು ಯಶಸ್ವಿಯಾಗಿ ಪತ್ತೆ ಹಚ್ಚುವಲ್ಲಿ ನೆರವಾಗಿದ್ದಾರೆ.

ವಿಶೇಷವಾಗಿ ಕಳ್ಳತನ, ದರೋಡೆ ಹಾಗೂ ಕೊಲೆ ಪ್ರಕರಣಗಳಲ್ಲಿ ಅಪರಾಧಿಗಳನ್ನು ಪತ್ತೆ ಹಚ್ಚುವಲ್ಲಿ ಅವರು ತೋರಿದ ಕಾರ್ಯಕ್ಷಮತೆ ಇಲಾಖೆಯ ಹಿರಿಯ ಅಧಿಕಾರಿಗಳ ಗಮನ ಸೆಳೆದಿದೆ.

ಅಪರಾಧ ಪತ್ತೆಯಲ್ಲಿನ ಸೂಕ್ಷ್ಮ ಪರಿಶೀಲನೆ, ಮಾಹಿತಿ ಸಂಗ್ರಹಣೆಯಲ್ಲಿನ ಚಾಣಾಕ್ಷತನ ಹಾಗೂ ತಂಡದೊಂದಿಗೆ ಸಮನ್ವಯ ಸಾಧಿಸುವ ಸಾಮರ್ಥ್ಯ ಇವರನ್ನು ಇತರರಿಂದ ವಿಭಿನ್ನಗೊಳಿಸಿದೆ.

ಹಲವು ಪ್ರಕರಣಗಳಲ್ಲಿ ಕಡಿಮೆ ಸಮಯದಲ್ಲೇ ಸುಳಿವುಗಳನ್ನು ಪಡೆದು ಆರೋಪಿಗಳನ್ನು ಬಂಧಿಸುವಲ್ಲಿ ಹಿರಿಯ ಅಧಿಕಾರಿಗಳ ಗಮನಕ್ಕೆ ತರುವಲ್ಲಿ ಯಶಸ್ವಿಯಾಗಿದ್ದಾರೆ.

ಇಂತಹ ವಿಶಿಷ್ಟ ವ್ಯಕ್ತಿತ್ವ ಹೊಂದಿದ ಜಾಫರ್ ಬಚ್ಚೇರಿ ಅವರು ಸಾರ್ವಜನಿಕರ ವಿಶ್ವಾಸ ಗಳಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಪೊಲೀಸ್ ಸೇವೆಯಲ್ಲಿನ ತಮ್ಮ ಪ್ರಾಮಾಣಿಕತೆ, ಶಿಸ್ತಿನ ಪಾಲನೆ ಹಾಗೂ ಕರ್ತವ್ಯನಿಷ್ಠೆಗಾಗಿ ಜಾಫರ್ ಬಚ್ಚೇರಿ ಅವರು ಹಿರಿಯ ಅಧಿಕಾರಿಗಳಿಂದ ಪ್ರಶಂಸೆ ಗಳಿಸಿದ್ದು, ಸಹೋದ್ಯೋಗಿಗಳಿಗೂ ಪ್ರೇರಣೆಯಾಗಿ ಪರಿಣಮಿಸಿದ್ದಾರೆ. ಅವರ ಸೇವಾ ಮನೋಭಾವ ಹಾಗೂ ಪರಿಶ್ರಮವನ್ನು ಗುರುತಿಸಿ ರಾಜ್ಯ ಸರ್ಕಾರ ಈ ಗೌರವಾನ್ವಿತ ಮುಖ್ಯಮಂತ್ರಿಗಳ ಪದಕವನ್ನು ಪ್ರದಾನ ಮಾಡಿದೆ.

ಮುಖ್ಯಮಂತ್ರಿಗಳ ಪದಕಕ್ಕೆ ಭಾಜನರಾದ ಹಿನ್ನೆಲೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಉಪ ಪೊಲೀಸ್ ವರಿಷ್ಠಾಧಿಕಾರಿಗಳಾದ ಪ್ರಭುಗೌಡ ಕಿರೇದಳ್ಳಿ, ಮುರ್ತಾಜಾ ಖಾದ್ರಿ, ಮಹಾಂತೇಶ ಸಜ್ಜನ ಸೇರಿದಂತೆ ಜಿಲ್ಲೆಯ ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿ ಜಾಫರ್ ಬಚ್ಚೇರಿ ಅವರನ್ನು ಅಭಿನಂದಿಸಿ ಶುಭಾಶಯ ಕೋರಿದ್ದಾರೆ.

ಜಾಫರ್ ಬಚ್ಚೇರಿ ಅವರ ಈ ಸಾಧನೆ ಪೊಲೀಸ್ ಇಲಾಖೆಯ ಇತರ ಸಿಬ್ಬಂದಿಗೆ ಪ್ರೇರಣೆಯಾಗಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಉತ್ತಮ ಸೇವೆ ಸಲ್ಲಿಸಲು ಪ್ರೋತ್ಸಾಹ ನೀಡಲಿದೆ.

### ವೀರೇಶ ಜೋಳದ ಸಾಧನೆಗೆ ಅಭಿನಂದನೆಗಳ ಮಹಾಪೂರ!

## ಎಸಿಬಿಯಲ್ಲಿ ಅತ್ಯುತ್ತಮ ಸೇವೆಗೆ ಸಿಎಂ ಪದಕ!



■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಸ್ತುತ ವಿಜಯನಗರ ಜಿಲ್ಲೆಯ ಮುನಿರಾಬಾದ್‌ನ ಇಂಡಿಯಾ ರಿಸರ್ವ್ ಬಟಾಲಿಯನ್‌ನಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವೀರೇಶ ಎ. ಜೋಳದ ಅವರು, ಈ ಹಿಂದೆ ಭ್ರಷ್ಟಾಚಾರ ನಿಗ್ರಹ ದಳ (ಎಸಿಬಿ) ಗದಗ ಜಿಲ್ಲಾ ಘಟಕದಲ್ಲಿ ಅತ್ಯುತ್ತಮವಾಗಿ ಸೇವೆ ಸಲ್ಲಿಸಿದ ಹಿನ್ನೆಲೆಯಲ್ಲಿ 2025ನೇ ಸಾಲಿನ ಮುಖ್ಯಮಂತ್ರಿಗಳ ಪದಕಕ್ಕೆ ಭಾಜನರಾಗಿದ್ದಾರೆ.

ಈ ಹಿಂದೆ ಗದಗ ಎಸಿಬಿ ಘಟಕದಲ್ಲಿ ಕರ್ತವ್ಯ ನಿರ್ವಹಿಸಿದ ಸಂದರ್ಭದಲ್ಲಿ ಅವರು ಭ್ರಷ್ಟಾಚಾರ ಪ್ರಕರಣಗಳ ಪತ್ತೆ ಮತ್ತು ತನಿಖೆಯಲ್ಲಿ ಗಮನಾರ್ಹ ಸಾಧನೆ ಮಾಡಿದ್ದಾರೆ. ವೈಯಕ್ತಿಕವಾಗಿ 40 ಕ್ಕೂ ಹೆಚ್ಚು ಪ್ರಕರಣಗಳಲ್ಲಿ ಪ್ರಮುಖ ಪಾತ್ರವಹಿಸಿ, ಯಾವುದೇ ಮಾಹಿತಿ ಸೋರಿಕೆಯಾಗದಂತೆ ಟ್ರ್ಯಾಪ್ ದಾಳಿ ಹಾಗೂ ಶೋಧ ಕಾರ್ಯಾಚರಣೆಗಳನ್ನು ಯಶಸ್ವಿಯಾಗಿ ನಡೆಸಿದ್ದಾರೆ.


ಸೂಕ್ಷ್ಮ ಯೋಜನೆ, ನಿಖರ ಕಾರ್ಯಾಚರಣೆ ಮತ್ತು ದೃಢ ಸಾಕ್ಷ್ಯಾಧಾರಗಳೊಂದಿಗೆ ಪ್ರಕರಣಗಳನ್ನು ದಾಖಲಿಸುವಲ್ಲಿ ಅವರು ತೋರಿದ ನಿಪುಣತೆ ಇಲಾಖೆಯ ಹಿರಿಯ ಅಧಿಕಾರಿಗಳ ಪ್ರಶಂಸೆಗೆ ಪಾತ್ರವಾಗಿದೆ. ಭ್ರಷ್ಟಾಚಾರದ ವಿರುದ್ಧ ಕಠಿಣ ನಿಲುವು ಹೊಂದಿ ಕಾರ್ಯನಿರ್ವಹಿಸಿದ ಅವರು, ಹಲವಾರು ಆರೋಪಿಗಳನ್ನು ಕಾನೂನಿನ ಬಲೆಗೆ ಬೀಳಿಸುವಲ್ಲಿ ಯಶಸ್ವಿಯಾಗಿದ್ದಾರೆ.


ಇದೇ ವೇಳೆ, ಸಾರ್ವಜನಿಕರಲ್ಲಿ ಭ್ರಷ್ಟಾಚಾರದ ವಿರುದ್ಧ ಜಾಗೃತಿ ಮೂಡಿಸುವ ಕಾರ್ಯದಲ್ಲಿಯೂ ಮುಂಚೂಣಿಯಲ್ಲಿ ನಿಂತು, ಜನರಲ್ಲಿ ಕಾನೂನು ಅರಿವು ಮತ್ತು ನೈತಿಕತೆ ಬೆಳೆಸಲು ಶ್ರಮಿಸಿದ್ದಾರೆ. ಇದರ ಫಲವಾಗಿ ಸಾರ್ವಜನಿಕರಿಂದ ಅಪಾರ ಮೆಚ್ಚುಗೆ ಗಳಿಸಿದ್ದಾರೆ.

ದೈನಂದಿನ ಕರ್ತವ್ಯದ ಜೊತೆಗೆ ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಛತ್ತೀಸ್‌ಗಢ, ರಾಜಸ್ಥಾನ, ಮಧ್ಯಪ್ರದೇಶ ಹಾಗೂ ಮೇಘಾಲಯ ರಾಜ್ಯಗಳಲ್ಲಿ ನಡೆದ ಚುನಾವಣಾ ಕರ್ತವ್ಯಗಳನ್ನು ಸಹ ಯಶಸ್ವಿಯಾಗಿ ನಿರ್ವಹಿಸಿರುವುದು ಅವರ ಸೇವಾ ನಿಷ್ಠೆಗೆ ಸಾಕ್ಷಿಯಾಗಿದೆ.

ಎಸಿಬಿಯಲ್ಲಿ ತೋರಿದ ಅತ್ಯುತ್ತಮ ಕಾರ್ಯಕ್ಷಮತೆ ಮತ್ತು ಪ್ರಾಮಾಣಿಕ ಸೇವೆಯನ್ನು ಪರಿಗಣಿಸಿ ಸಿಎಂ ಪದಕ ಲಭಿಸಿರುವುದು ಗದಗ ಜಿಲ್ಲೆ ಹಾಗೂ ಹುಟ್ಟೂರು ಕೊಪ್ಪಳ ಜಿಲ್ಲೆಯ ಅಳವಂಡಿ ಗ್ರಾಮಸ್ಥರಿಗೆ ಹೆಮ್ಮೆಯ ಸಂಗತಿಯಾಗಿದೆ. ಈ ಸಾಧನೆಗೆ ಅಧಿಕಾರಿಗಳು, ಸಿಬ್ಬಂದಿ ಹಾಗೂ ಸ್ನೇಹಿತರು ಅಭಿನಂದನೆಗಳನ್ನು ತಿಳಿಸಿದ್ದಾರೆ.

## ಇಂದು ಜೇಡರ ದಾಸಿಮಯ್ಯ, ಕಿತ್ತೂರ ರಾಣಿ ಚೆನ್ನಮ್ಮ ಕುರಿತು ಉಪನ್ಯಾಸ





■ವಿಜಯಸಾಕ್ಷಿ ಸುದ್ದಿ, ಗದಗ

ಬಸವದಳದ 1691ನೇ ಶರಣ ಸಂಗಮದ ಅಂಗವಾಗಿ, ವಿಶ್ವ ಮಹಿಳಾ ದಿನಾಚರಣೆ ಅಂಗವಾಗಿ "ವೀರ ರಾಣಿಯರು" ಸರಣಿ ಉಪನ್ಯಾಸ ಕಾರ್ಯಕ್ರಮವು ದಿ. 29-03-2026 ಭಾನುವಾರ ಬೆಳಿಗ್ಗೆ 10 ಗಂಟೆಗೆ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ನಡೆಯಲಿದೆ.

ಈ ಕಾರ್ಯಕ್ರಮದಲ್ಲಿ ಶರಣ ಜೇಡರ ದಾಸಿಮಯ್ಯನವರ ಹಾಗೂ ಕಿತ್ತೂರ ರಾಣಿ ಚೆನ್ನಮ್ಮರ ಸಾಹಸ ಮತ್ತು ಜೀವನ ಚರಿತ್ರೆಗಳ ಕುರಿತು ಉಪನ್ಯಾಸಗಳು ನಡೆಯಲಿವೆ.

ಪೂಜ್ಯ ಬಸವಮಹಾಂತ ಸ್ವಾಮಿಗಳು, ಶ್ರೀ ಮಹಾಲಿಂಗೇಶ್ವರ ಮಠ, ಶಿರಸಂಗಿ ಇವರು ಸಾನಿಧ್ಯವನ್ನು ವಹಿಸುವರು. ಅಧ್ಯಕ್ಷತೆಯನ್ನು ಶರಣ ಎಂ. ಬಿ. ಲಿಂಗದಾಳ, ಕಾರ್ಯಾಧ್ಯಕ್ಷರು, ಬಸವದಳ, ಗದಗ ವಹಿಸಲಿದ್ದಾರೆ.

ಉಪನ್ಯಾಸಕರಾಗಿ ಶರಣ ಪಿ. ಟಿ. ಅಸುಂಡಿ, ಶರಣತತ್ವ ಚಿಂತಕರು, ಜೇಡರ ದಾಸಿಮಯ್ಯನವರ ಕುರಿತು ವಿವರಿಸುತ್ತಾರೆ. ಶರಣೆ ಶಾಂತಲಾ ಹಂಚಿನಾಳ, ಜ.ತೋ. ಬಾಲಕಿಯರ ಪ್ರೌಢಶಾಲೆ, ಡಂಬಳ ಶಿಕ್ಷಕಿಯರು ಕಿತ್ತೂರ ರಾಣಿ ಚೆನ್ನಮ್ಮರ ಜೀವನ ಚರಿತ್ರೆಯ ಕುರಿತು ಉಪನ್ಯಾಸ ನೀಡಲಿದ್ದಾರೆ. ಕಾರ್ಯಕ್ರಮದಲ್ಲಿ ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಇತರೆ ಆಸಕ್ತರು ಭಾಗವಹಿಸುವಂತೆ ಸಂಘಟಕರಾದ ಎಸ್. ಎ. ಮುಗದ ಅವರು ವಿನಂತಿಸಿದ್ದಾರೆ.

# ನರೇಗಲ್ಲದಲ್ಲಿ ವೃತ್ತ ನಾಮಕರಣಕ್ಕೆ ಆಕ್ಷೇಪಣೆಗೆ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ನರೇಗಲ್ಲ ಪಟ್ಟಣ ಪಂಚಾಯತ್ ವ್ಯಾಪ್ತಿಯ ಪೊಲೀಸ್ ಠಾಣೆ ಸಮೀಪದ ನಾಲ್ಕು ಕೂಡು ರಸ್ತೆ ವೃತ್ತಕ್ಕೆ "ಶ್ರೀ ನಿಜಶರಣ ಅಂಬಿಗರ ಚೌಡಯ್ಯ ವೃತ್ತ" ಎಂದು ನಾಮಕರಣ ಮಾಡುವಂತೆ ಸಂಬಂಧಿತ ಸೇವಾ ಸಂಸ್ಥೆಯವರು ಕೋರಿಕೆ ಸಲ್ಲಿಸಿದ್ದಾರೆ.

ಕರ್ನಾಟಕ ಪೌರಸಭೆಗಳ ಅಧಿನಿಯಮ 1964ರ ನಿಯಮ 211ರ ಅನ್ವಯ ವೃತ್ತ ನಾಮಕರಣ ಕುರಿತು ಸಾರ್ವಜನಿಕರಿಂದ ಸಲಹೆ ಹಾಗೂ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿದೆ. ಸಾರ್ವಜನಿಕರು ತಮ್ಮ ಆಕ್ಷೇಪಣೆಗಳನ್ನು ಈ ಪ್ರಕಟಣೆ ಪ್ರಕಟವಾದ ದಿನಾಂಕದಿಂದ 30 ದಿನಗಳೊಳಗಾಗಿ ಲಿಖಿತವಾಗಿ ನರೇಗಲ್ಲ ಪಟ್ಟಣ ಪಂಚಾಯತಿಗೆ ಸಲ್ಲಿಸಬಹುದು. ಅವಧಿ ಮೀರಿ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಪಟ್ಟಣ ಪಂಚಾಯತ್ ಆಡಳಿತಾಧಿಕಾರಿ ಕಿರಣಕುಮಾರ ಜಿ. ಕುಲಕರ್ಣಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# "ಬರವಸೆಯೊಂದಿಗೆ ಬದುಕು" ಪುಸ್ತಕ ಬಿಡುಗಡೆ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯಲ್ಲಿ ನಡೆದ ಆಡಳಿತ ಮಂಡಳಿ ಸಭೆಯಲ್ಲಿ ಶ್ರೀ ಜಯದೇವ ಎಂ. ಮೆಣಸಗಿ ಅವರ ಸಂಪಾದನೆಯ "ಬರವಸೆಯೊಂದಿಗೆ ಬದುಕು" ಪುಸ್ತಕವನ್ನು ಸಂಸ್ಥೆಯ ಅಧ್ಯಕ್ಷ ಶರಣಬಸಪ್ಪ ಸಂಗಪ್ಪ ಗುಡಿಮನಿ ಬಿಡುಗಡೆ ಮಾಡಿದ್ದಾರೆ.

ಪುಸ್ತಕವು ಕೊಪ್ಪಳದ ಶ್ರೀಮಠದ ಶ್ರೀ ಗವಿಸಿದ್ದೇಶ್ವರ ಸ್ವಾಮಿಜಿಯವರ ನುಡಿಮುತ್ತುಗಳನ್ನು ಒಳಗೊಂಡಿದ್ದು, ಸಂಸಾರ, ಜೀವನ ಮತ್ತು ಸಮಾಜದಲ್ಲಿ ಹೇಗೆ ಸಮತೋಲನ ಬೆಳೆಸಬೇಕು ಎಂಬುದರ ಬಗ್ಗೆ ಸ್ಪಷ್ಟ ಮಾರ್ಗದರ್ಶನ ನೀಡುತ್ತದೆ. ಜಯದೇವ ಮೆಣಸಗಿ ಈ ನುಡಿಮುತ್ತುಗಳನ್ನು ಸಂಪಾದನೆಯ ಮೂಲಕ ಒಟ್ಟುಗೂಡಿಸಿ ಜನರಿಗೆ ಓದಿ ಅಳವಡಿಸಿಕೊಳ್ಳುವಂತೆ ಮಾಡಿದ್ದಾರೆ.

ಶರಣಬಸಪ್ಪ ಸಂಗಪ್ಪ ಗುಡಿಮನಿ ಮಾತನಾಡಿ, "ಈ ಪುಸ್ತಕದ ಮೂಲಕ ಸ್ವಾಮೀಜಿ ಅವರ ನುಡಿಮುತ್ತುಗಳನ್ನು ಓದಿ, ಜೀವನದಲ್ಲಿ ಅಳವಡಿಸಿಕೊಂಡು ಮಾನಸಿಕ ಶಾಂತಿ ಮತ್ತು ಸಕಾರಾತ್ಮಕತೆಯನ್ನು ಬೆಳೆಸಿಕೊಳ್ಳಬಹುದು. ಸಮಾಜದಲ್ಲಿ ಬರುವ ಬದಲಾವಣೆಗಳಿಗೆ ತಕ್ಕ ಮುನ್ಸೂಚನೆ ನೀಡುವ ಹಾಗೂ ಜನರಿಗೆ ಮಾರ್ಗದರ್ಶನ ನೀಡುವ ಶಕ್ತಿ ಇದರಲ್ಲಿ ಇದೆ" ಎಂದು ಹೇಳಿದರು. ಈ ಕಾರ್ಯಕ್ರಮದಲ್ಲಿ ಸಂಸ್ಥೆಯ ಪದಾಧಿಕಾರಿಗಳು, ಆಡಳಿತ ಮಂಡಳಿ ಸದಸ್ಯರು ಮತ್ತು ಮಾಜಿ ಅಧ್ಯಕ್ಷರು ಉಪಸ್ಥಿತರಿದ್ದರು.

# ಸರ್ವೋದಯ ಗ್ರಾಮೀಣ ಅಭಿವೃದ್ಧಿ ಸಂಸ್ಥೆಗೆ ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಸರ್ಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ಹಮ್ಮಿಕೊಂಡಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಗದಗಿನ ಸರ್ವೋದಯ ಸಮಗ್ರ ಗ್ರಾಮೀಣ ಅಭಿವೃದ್ಧಿ ಕ್ರಿಯಾ ಸಂಸ್ಥೆಗೆ 2026ನೇ ಸಾಲಿನ "ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿ" ಪ್ರದಾನ ಮಾಡಲಾಯಿತು.

ಕಳೆದ 18 ವರ್ಷಗಳಿಂದ ಸಾಮಾಜಿಕ ಹಾಗೂ ಆರ್ಥಿಕ ಕ್ಷೇತ್ರಗಳಲ್ಲಿ ಮಹಿಳಾ ಸ್ವಸಹಾಯ ಸಂಘಗಳ ಮೂಲಕ ಮಹಿಳಾ ಸಬಲೀಕರಣಕ್ಕಾಗಿ ಶ್ರಮಿಸುತ್ತಿರುವ ಈ ಸಂಸ್ಥೆ, ಧಾರವಾಡ, ಗದಗ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿ ಮಹಿಳೆಯರಿಗೆ ತರಬೇತಿ, ಉದ್ಯೋಗಾವಕಾಶ ಹಾಗೂ ಮಾರುಕಟ್ಟೆ ವ್ಯವಸ್ಥೆ ಕುರಿತು ಮಾರ್ಗದರ್ಶನ ನೀಡುತ್ತಿದೆ. ಮಹಿಳೆಯರ ಸರ್ವಾಂಗೀಣ ಅಭಿವೃದ್ಧಿಗೆ ನೀಡಿದ ಮಹತ್ವದ ಕೊಡುಗೆಯನ್ನು ಪರಿಗಣಿಸಿ ಈ ಪ್ರಶಸ್ತಿಯನ್ನು ನೀಡಲಾಗಿದೆ.

ಸಂಸ್ಥೆಯ ಕಾರ್ಯದರ್ಶಿ ಶ್ರೀಮತಿ ನಾಗಮ್ಮ ಅಂಬಿಗೇರ ಅವರಿಗೆ ಈ ಪ್ರಶಸ್ತಿಯನ್ನು ಪ್ರಧಾನ ಮಾಡಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಚಿವೆ ಲಕ್ಷ್ಮೀ ಆರ್. ಹೆಬ್ಬಾಳ್ಕರ್, ಇಲಾಖೆಯ ಕಾರ್ಯದರ್ಶಿ ಡಾ. ಶಾಮ್ಲಾ ಇಕ್ಬಾಲ್, ನಿರ್ದೇಶಕ ಮಹೇಶ್ ಬಾಬು ಸೇರಿದಂತೆ ಇತರ ಗಣ್ಯರು ಉಪಸ್ಥಿತರಿದ್ದರು.

# ರಾಜ್ಯದ ಉಪಚುನಾವಣೆಗಳಲ್ಲಿ ಕಾಂಗ್ರೆಸ್ ಮೇಲುಗೈ!

## ಜನಪರ ಆಡಳಿತಕ್ಕೆ ಮತದಾರರ ಬೆಂಬಲ – ಅಶೋಕ ಮಂದಾಲಿ ವಿಶ್ವಾಸ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ವಿವಿಧ ವಿಧಾನಸಭಾ ಕ್ಷೇತ್ರಗಳಲ್ಲಿ ನಡೆದ ಉಪಚುನಾವಣೆಗಳಲ್ಲಿ ಕಾಂಗ್ರೆಸ್ ಪಕ್ಷವು ನಿರಂತರವಾಗಿ ಮೇಲುಗೈ ಸಾಧಿಸುತ್ತ ಬಂದಿದ್ದು, ಜನಪರ ಆಡಳಿತಕ್ಕೆ ಮತದಾರರು ಮರು ಬೆಂಬಲ ನೀಡುತ್ತಿದ್ದಾರೆ ಎಂದು ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, 2026ರ ಎಪ್ರಿಲ್ 9ರಂದು ನಡೆಯಲಿರುವ ದಾವಣಗೆರೆ ದಕ್ಷಿಣ ಮತ್ತು ಬಾಗಲಕೋಟೆ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯಲ್ಲಿ ಕಾಂಗ್ರೆಸ್ ಅಭೂತಪೂರ್ವ ಗೆಲುವು ಸಾಧಿಸಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದ್ದು,

ದಾವಣಗೆರೆ ದಕ್ಷಿಣ ಕ್ಷೇತ್ರಕ್ಕೆ ಸಮರ್ಥ್ ಶಾಮನೂರು ಹಾಗೂ ಬಾಗಲಕೋಟೆ ಕ್ಷೇತ್ರಕ್ಕೆ ಉಮೇಶ ಮೇಟಿ ಅವರನ್ನು ಅಭ್ಯರ್ಥಿಗಳನ್ನಾಗಿ ಘೋಷಿಸಲಾಗಿದೆ ಎಂದಿದ್ದಾರೆ.

ರಾಜ್ಯದ ರಾಜಕೀಯ ಇತಿಹಾಸವನ್ನು ಉಲ್ಲೇಖಿಸಿರುವ ಅವರು, 1989ರಲ್ಲಿ ಕಾಂಗ್ರೆಸ್ ಪಕ್ಷವು 178 ಸ್ಥಾನಗಳನ್ನು ಗೆದ್ದು ದಾಖಲೆಯೊಂದಿಗೆ ಸರ್ಕಾರ ರಚಿಸಿತ್ತು. 1999ರಲ್ಲಿ ಎಸ್.ಎಂ. ಕೃಷ್ಣ ಅವರ ನೇತೃತ್ವದಲ್ಲಿ 132 ಸ್ಥಾನಗಳೊಂದಿಗೆ ಸ್ಥಿರ ಸರ್ಕಾರ ನೀಡಿ ಬೆಂಗಳೂರನ್ನು ಜಾಗತಿಕ ಐಟಿ ಕೇಂದ್ರವನ್ನಾಗಿ ರೂಪಿಸಲಾಯಿತು ಎಂದು ಹೇಳಿದ್ದಾರೆ.

2013ರಲ್ಲಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರವು 122 ಸ್ಥಾನಗಳೊಂದಿಗೆ ಅಧಿಕಾರಕ್ಕೆ ಬಂದು ಅನ್ನಭಾಗ್ಯ ಸೇರಿದಂತೆ ಜನಪರ ಯೋಜನೆಗಳನ್ನು ಜಾರಿಗೆ ತಂದಿತು. 2023ರಲ್ಲಿ 135 ಸ್ಥಾನಗಳೊಂದಿಗೆ ಮತ್ತೆ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರ್ಕಾರ ಪಂಚ ಗ್ಯಾರಂಟಿ ಯೋಜನೆಗಳ ಮೂಲಕ ಜನರಿಗೆ ಆರ್ಥಿಕ ಭದ್ರತೆ ನೀಡುತ್ತಿದೆ ಎಂದು ವಿವರಿಸಿದ್ದಾರೆ.



ಕಾಂಗ್ರೆಸ್ ಆಡಳಿತದ ಅವಧಿಯಲ್ಲಿ ನಡೆದ ಉಪಚುನಾವಣೆಗಳಲ್ಲಿ ಪಕ್ಷವು ಹೆಚ್ಚಿನ ಪ್ರಮಾಣದಲ್ಲಿ ಜಯ ಸಾಧಿಸಿರುವುದನ್ನು ಉಲ್ಲೇಖಿಸಿರುವ ಅಶೋಕ ಮಂದಾಲಿ, 2024ರಲ್ಲಿ ಶಿಗ್ಗಾಂವಿ, ಸಂಡೂರು





ಹಾಗೂ ಚನ್ನಪಟ್ಟಣ ಕ್ಷೇತ್ರಗಳಲ್ಲಿ ನಡೆದ ಉಪಚುನಾವಣೆಗಳಲ್ಲಿ ಕಾಂಗ್ರೆಸ್ ಗೆಲುವು ಸಾಧಿಸಿದೆ ಎಂದು ಹೇಳಿದ್ದಾರೆ. 2013ರಿಂದ 2018ರ ಅವಧಿಯಲ್ಲಿ ನಡೆದ ಉಪಚುನಾವಣೆಗಳಲ್ಲಿ ಕಾಂಗ್ರೆಸ್ ಶೇ.80ಕ್ಕೂ ಹೆಚ್ಚು ಯಶಸ್ಸು ಗಳಿಸಿದ್ದು, 2014ರಿಂದ 2024ರವರೆಗೆ ನಡೆದ ಉಪಚುನಾವಣೆಗಳಲ್ಲಿ ಶೇ.65ರಷ್ಟು ಸ್ಥಾನಗಳನ್ನು ಗೆದ್ದಿದೆ. ಕಳೆದ 10 ವರ್ಷಗಳಲ್ಲಿ ನಡೆದ 25 ಪ್ರಮುಖ ಉಪಚುನಾವಣೆಗಳಲ್ಲಿ ಕಾಂಗ್ರೆಸ್ ಸುಮಾರು 18 ಸ್ಥಾನಗಳನ್ನು (ಶೇ.72) ಗೆದ್ದಿದೆ ಎಂದು ಮಾಹಿತಿ ನೀಡಿದ್ದಾರೆ.

ಮಹಿಳಾ ಮತದಾರರ ಪಾತ್ರದ ಕುರಿತು, ಪಂಚ ಗ್ಯಾರಂಟಿ ಯೋಜನೆಗಳ ಪರಿಣಾಮವಾಗಿ ಮಹಿಳಾ ಮತದಾನ ಪ್ರಮಾಣವು ಪುರುಷರಿಗಿಂತ 2.5ರಿಂದ 4 ಶೇಕಡಾ ಹೆಚ್ಚಾಗಿದೆ. 2024ರ ಚನ್ನಪಟ್ಟಣ ಮತ್ತು ಶಿಗ್ಗಾಂವಿ ಉಪಚುನಾವಣೆಗಳಲ್ಲಿ ಮಹಿಳಾ ಮತದಾರರ ಒಲವು ಕಾಂಗ್ರೆಸ್ ಪರ ಶೇ.12ರಷ್ಟು ಹೆಚ್ಚಾಗಿದೆ ಎಂದು ತಿಳಿಸಿದರು. ಹಾನಗಲ್ ಉಪಚುನಾವಣೆಯ ಉದಾಹರಣೆಯನ್ನು ಉಲ್ಲೇಖಿಸಿದ ಅವರು, 2021ರಲ್ಲಿ ಬಿಜೆಪಿ ಆಡಳಿತದಲ್ಲಿದ್ದರೂ ಕಾಂಗ್ರೆಸ್ ಅಭ್ಯರ್ಥಿ ಶ್ರೀನಿವಾಸ್ ಮಾನೆ ಅವರು 7,373 ಮತಗಳ ಅಂತರದಿಂದ ಜಯಗಳಿಸಿದ್ದು ಆಡಳಿತ ಪಕ್ಷಕ್ಕೆ ದೊಡ್ಡ ಆಘಾತ ನೀಡಿತ್ತು ಎಂದರು.

### ದಾವಣಗೆರೆ ದಕ್ಷಿಣ ಕ್ಷೇತ್ರದ ಮಾಹಿತಿ

2008ರ ಕ್ಷೇತ್ರ ಮರುವಿಂಗಡಣೆಯ ನಂತರ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರ ರಚನೆಯಾಯಿತು. ಸುಮಾರು 2.10–2.15 ಲಕ್ಷ ಮತದಾರರಿದ್ದು, ಪುರುಷರು 1.08 ಲಕ್ಷ, ಮಹಿಳೆಯರು 1.02 ಲಕ್ಷ ಇದ್ದಾರೆ.

2023ರಲ್ಲಿ ಕಾಂಗ್ರೆಸ್ 27,888 ಮತಗಳ ಅಂತರದಿಂದ ಜಯಗಳಿಸಿದ್ದು, ಶೇ.58ರಷ್ಟು ಮತಗಳನ್ನು ಪಡೆದಿತ್ತು. 2018ರಲ್ಲಿ 15,884 ಮತಗಳ ಅಂತರದಿಂದ ಮತ್ತು 2013ರಲ್ಲಿ 40,158 ಮತಗಳ ಭರ್ಜರಿ ಅಂತರದಿಂದ ಕಾಂಗ್ರೆಸ್ ಗೆಲುವು ಸಾಧಿಸಿತ್ತು.

### ಬಾಗಲಕೋಟೆ ಕ್ಷೇತ್ರದ ಮಾಹಿತಿ

ಬಾಗಲಕೋಟೆ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಸುಮಾರು 2.25–2.30 ಲಕ್ಷ ಮತದಾರರಿದ್ದಾರೆ. ಪುರುಷರು ಸುಮಾರು 1.15 ಲಕ್ಷ ಮತ್ತು ಮಹಿಳೆಯರು 1.10 ಲಕ್ಷ.

2023ರಲ್ಲಿ ಕಾಂಗ್ರೆಸ್ ಸುಮಾರು 15,000–18,000 ಮತಗಳ ಅಂತರದಿಂದ ಜಯಗಳಿಸಿದ್ದು, ಶೇ.50–52ರಷ್ಟು ಮತಗಳನ್ನು ಪಡೆದಿತ್ತು. ಹಿಂದುಳಿದ ವರ್ಗಗಳು ಹಾಗೂ ಅಲ್ಪಸಂಖ್ಯಾತರ ಬೆಂಬಲ ಕಾಂಗ್ರೆಸ್ ಗೆಲುವಿಗೆ ಕಾರಣವಾಗಿದೆ.

ದಾವಣಗೆರೆ ದಕ್ಷಿಣ ಹಾಗೂ ಬಾಗಲಕೋಟೆ ಕ್ಷೇತ್ರಗಳಲ್ಲಿ ಹಿಂದುಳಿದ ವರ್ಗಗಳು, ದಲಿತರು ಹಾಗೂ ಅಲ್ಪಸಂಖ್ಯಾತರ ಮತಗಳು ಶೇ.65ಕ್ಕಿಂತ ಹೆಚ್ಚಿದ್ದು, ಇದು ಕಾಂಗ್ರೆಸ್‌ಗೆ ಬಲವಾದ ಆಧಾರವಾಗಿದೆ ಎಂದು ಹೇಳಿದ್ದಾರೆ. ಕಳೆದ 30 ವರ್ಷಗಳಲ್ಲಿ ಕಾಂಗ್ರೆಸ್ ಕನಿಷ್ಠ ಮೂರು ಬಾರಿ 120ಕ್ಕೂ ಹೆಚ್ಚು ಸ್ಥಾನಗಳನ್ನು ಗೆದ್ದು ಸ್ಪಷ್ಟ ಬಹುಮತದೊಂದಿಗೆ ಸರ್ಕಾರ ರಚಿಸಿದೆ. ಬಿಜೆಪಿ ಪಕ್ಷವು ಅತಿ ಹೆಚ್ಚು ಸ್ಥಾನಗಳನ್ನು ಗೆದ್ದ ಸಂದರ್ಭದಲ್ಲೂ ಬಹುಮತದ ಗಡಿ ದಾಟಲು ವಿಫಲವಾಗಿದೆ ಎಂದು ಟೀಕಿಸಿದ್ದಾರೆ.

# ಲಕ್ಷ್ಮೇಶ್ವರದಲ್ಲಿ ಸಂಭ್ರಮದ ಶ್ರೀರಾಮ ನವಮಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಭಾವಸಾರ ಕ್ಷತ್ರಿಯ ಸಮಾಜದಿಂದ ಪಾಂಡುರಂಗ ದೇವಸ್ಥಾನದಲ್ಲಿ ಮರ್ಯಾದಾ ಪುರುಷೋತ್ತಮ ಶ್ರೀರಾಮ ನವಮಿ ನಿಮಿತ್ತ ತೊಟ್ಟಿಲ ಕಾರ್ಯಕ್ರಮ ಶ್ರದ್ಧಾ ಭಕ್ತಿಯಿಂದ ನೆರವೇರಿಸಲಾಯಿತು.

ಕಾರ್ಯಕ್ರಮದಲ್ಲಿ ಹಿರಿಯರಾದ ಪುಂಡಲೀಕ ಮಾತನಾಡಿ, ಧರ್ಮ ಸಂಸ್ಥಾಪನೆಗಾಗಿ ಮರ್ಯಾದಾ ಪುರುಷೋತ್ತಮನಾಗಿ ಅವತಾರವೆತ್ತಿದ ಶ್ರೀ ರಾಮ ಸಾಕ್ಷಾತ್ ದೇವರೇ ಆಗಿದ್ದಾನೆ. ಸೂರ್ಯವಂಶಸ್ಥನಾದ ಶ್ರೀರಾಮನು ಕಾಲಾತೀತ, ಗುಣಾತೀತನಾಗಿದ್ದು, ಶ್ರೀರಾಮನೇ ಮೂಲವಾಗಿರುವ ರಾಮಾಯಣದ ಪ್ರಸಂಗಗಳು ಬದು–ಕಿಗೆ ಆದರ್ಶವಾಗಿವೆ. ಶ್ರೀರಾಮ ಎಲ್ಲರ ಬದುಕಿಗೂ ಆದರ್ಶ ಮತ್ತು ಪೂಜ್ಯನೀಯವಾಗಿದ್ದು, ಶ್ರೀರಾಮ ನಾಮ ಜಪದಿಂದ ಕಷ್ಟಗಳು ಪರಿಹಾರವಾಗಿ, ಸುಖ-ನೆಮ್ಮದಿಯ ಬದುಕು ನಮ್ಮದಾಗುತ್ತದೆ ಎಂದು ಹೇಳಿದರು.

ಈ ವೇಳೆ ಸುಮಂಗಲೆಯರು ಶ್ರೀರಾಮ ಸ್ವರೂಪಿ ಮೂರ್ತಿಯನ್ನು ತೊಟ್ಟಿಲಲ್ಲಿ ಹಾಕಿ ಭಕ್ತಿಯಿಂದ ತೂಗಿ ರಾಮನಾಮದ ಭಕ್ತಿಗೀತೆ ಹಾಡಿದರು. ಮಹಿಳೆಯರು ಶ್ರೀರಾಮ ರಕ್ಷಾಸ್ತೋತ್ರ ಪಠಣ, ಭಕ್ತಿ ಹಾಡುಗಳನ್ನು ಹಾಡಿದರು. ಭಜನಾ ಮಂಡಳಿಯವರು ಸಾಂಪ್ರದಾಯಿಕ ಶ್ರೀ ರಾಮ ನವಮಿ ನೈಮಿತ್ತಿಕ ಅಭಂಗ, ಭಜನೆ ಮಾಡಿದರು.

ಇದೇ ವೇಳೆ ಮುತ್ತೈದೆಯರಿಗೆ ಉಡಿ ತುಂಬಲಾಯಿತು. ಶ್ರೀಬಾಲ ರಾಮಚಂದ್ರನನ್ನು ಮಹಿಳೆಯರು ತೊಟ್ಟಿಲಲ್ಲಿ ಹಾಕಿ ಸಾಂಪ್ರದಾಯಿಕ ಜೋಗುಳದ ಹಾಡುಗಳನ್ನು ಹಾಡಿ ಸಂಭ್ರಮಿಸಿದರು. ಮಂಗಳಾರತಿ ನಂತರ ಎಲ್ಲರಿಗೂ ಕೊಸಂಬರಿ ಪಾನಕ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ, ಕಿರಣ ನವಲೆ, ಸತೀಶ ಮಾಂಡ್ರೆ, ಅರುಣ ನವಲೆ, ತಾಂದಳೆ, ಸಂತೋಷ ಸರ್ವದೆ, ನಾಗರಾಜ ತಿರುಮಲೆ, ಗಣೇಶ ಜಾಧವ್, ಪರಶುರಾಮ ಮೆಹರವಾಡೆ, ಮಹಿಳಾ ಮಂಡಳಿಯ ರುಕ್ಮಿಣಿಬಾಯಿ, ಸರೋಜಾಬಾಯಿ, ಮೀರಾ, ಸಂತೋಷಿ, ತ್ರಿವೇಣಿ, ಲಲಿತಾಬಾಯಿ, ಗಾಯತ್ರಿ, ರಾಜೇಶ್ವರಿ, ಲಕ್ಷ್ಮಿ, ಕವಿತಾ, ಲಾವಣ್ಯ, ಲತಾ, ಶೈಲಕ್ಕ ನವಲೆ, ಲತಾ ತಟ್ಟಿ, ಅನ್ನಪೂರ್ಣ ಓದುನವರ, ಸುಮಂಗಲಾ ಕುಂಬಾರ, ಪುಷ್ಪಾ ಬದಿ, ಪ್ರೀತಿ ಬಸವಾ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಪಶು ಚಿಕಿತ್ಸಾಲಯ ಕಟ್ಟಡ ಕಾಮಗಾರಿ ಆರಂಭಿಸಲು ಆಗ್ರಹ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಕೇಂದ್ರ ಸರಕಾರದ ಗ್ರಾಮೀಣ ಮೂಲ ಸೌಕರ್ಯದಡಿ ಮಂಜೂರಾಗಿರುವ ಮೇಲ್ದರ್ಜೆಯ ಪಶು ಚಿಕಿತ್ಸಾಲಯದ ಕಟ್ಟಡವನ್ನು ಮಾರ್ಚ್ 30 ರೊಳಗೆ ಪ್ರಾರಂಭಿಸದಿದ್ದರೆ, ಲಕ್ಕುಂಡಿ ಗ್ರಾಮ ಪಂಚಾಯತಿ ಮುಂದೆ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗುವುದು ಎಂದು ಸ್ಥಳೀಯ ರೈತ ಸಮುದಾಯ ಎಚ್ಚರಿಕೆ ನೀಡಿದೆ.

ಈ ಕುರಿತು ಗ್ರಾಮ ಪಂಚಾಯತ್ ಆಡಳಿತಾಧಿಕಾರಿ ಹಾಗೂ ಅಭಿವೃದ್ಧಿ ಅಧಿಕಾರಿಗಳಿಗೆ ಪತ್ರ ಬರೆದಿರುವ ರೈತರು. ಈಗಿರುವ ಪಶು ಚಿಕಿತ್ಸಾಲಯವು ಚಿಕ್ಕದಾಗಿದ್ದನ್ನು ಮೇಲ್ದರ್ಜೆಗೆ ಏರಿಸುವ ಉದ್ದೇಶದಿಂದ ಕೇಂದ್ರ ಸರಕಾರವು ಗ್ರಾಮೀಣ ಮೂಲ ಸೌಕರ್ಯದಡಿ ಸುಸಜ್ಜಿತ ಕಟ್ಟಡ ನಿರ್ಮಾಣ ಮಾಡಲು 49.96 ಲಕ್ಷ ರೂ. ಅನುದಾನವನ್ನು ಬಿಡುಗಡೆ ಮಾಡಿದ್ದು, 11 ತಿಂಗಳು ಕಳೆದರೂ ಕಾಮಗಾರಿ ಆರಂಭವಾಗಿಲ್ಲ. ಲಕ್ಕುಂಡಿ ಗ್ರಾಮದ ಜನಸಂಖ್ಯೆ ಹಾಗೂ ಜಾನುವಾರುಗಳ ಸಂಖ್ಯೆಗಳಿಗನುಗುಣವಾಗಿ ಕೇಂದ್ರ ಸರಕಾರವು ಮೇಲ್ದರ್ಜೆಯ ಪಶು ಚಿಕಿತ್ಸಾಲಯಕ್ಕೆ ಅನುದಾನವನ್ನು ಬಿಡುಗಡೆ ಮಾಡಿದೆ.

ಆದರೆ ಈವರೆಗೂ ಕಟ್ಟಡ ನಿರ್ಮಾಣ ಪ್ರಾರಂಭವಾಗಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

"ಕಳೆದ 4 ವರ್ಷಗಳಲ್ಲಿ ಹೈನುಗಾರಿಕೆ ಬೆಳವಣಿಗೆ ಹೆಚ್ಚಿದ್ದು, 1,500–2,000 ಹಸುಗಳು, 10,000 ಕುರಿಗಳು ಮತ್ತು ಮೇಕೆಗಳು, 311 ನಾಯಿ, 1,000 ಕೋಳಿ, 200 ಹಂದಿ, 200 ಎತ್ತು ಹಾಗೂ ಸಾಕು ಪ್ರಾಣಿಗಳಿವೆ. ಇವುಗಳಿಗೆ ರೋಗ ಬಂದರೆ ಸೂಕ್ತ ಚಿಕಿತ್ಸೆಯಿಲ್ಲದೇ ರೈತರು ಗೋಳಾಡುತ್ತಿದ್ದಾರೆ ಎಂದು ತಿಳಿಸಿದ್ದಾರೆ.

ಅದರಿಂದ ಈಗ ಮಂಜೂರಿಯಾಗಿರುವ ಮೇಲ್ದರ್ಜೆಯ ಪಶು ಚಿಕಿತ್ಸಾಲಯದ ಕಟ್ಟಡದ ಕಾಮಗಾರಿಯನ್ನು ಮಾರ್ಚ್ 30 ರಂದು ಆರಂಭಿಸಬೇಕು. ತಪ್ಪಿದ್ದಲ್ಲಿ ಮಾರ್ಚ್ 31 ರಂದು ಸಮಸ್ತ ರೈತಾಪಿ ವರ್ಗ ಗ್ರಾಮ ಪಂಚಾಯತಿಗೆ ಮುತ್ತಿಗೆ ಹಾಕಿ ಧರಣಿ ಸತ್ಯಾಗ್ರಹ ಮಾಡುವುದಾಗಿ ಎಚ್ಚರಿಕೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ತಾ. ಪಂ. ಮಾಜಿ ಅಧ್ಯಕ್ಷ ಎಂ. ಎನ್. ಉಮಚಗಿ, ಗ್ರಾ. ಪಂ. ಮಾಜಿ ಸದಸ್ಯ ಬಿ.ಬಿ. ಮಾಡಲಗೇರಿ, ತಾ. ಪಂ. ಮಾಜಿ ಸದಸ್ಯ ಮಹೇಶ ಮುಸ್ಕಿನಭಾವಿ, ಎಸ್.ಬಿ. ಸಜ್ಜನರ, ಎನ್.ಐ. ಕಿರಿಟಗೇರಿ, ಎಸ್.ಡಿ. ಭಜಂತ್ರಿ, ಮರಿಯಪ್ಪ ವಡ್ಡರ, ಕೆ.ಬಿ. ಬೆನ್ನಳ್ಳಿ, ತೋಟಪ್ಪ ಕಣವಿ, ಎನ್.ಎಸ್. ರೋಣದ, ಶಿವನಗೌಡ ಗೌಡ್ರ, ಎಸ್.ಬಿ. ಬೂದಿಹಾಳ, ವೆಂಕಪ್ಪ ನೂಕಾಪೂರ, ಜಿ.ಎಸ್. ಯಲಿಶಿರುಂದ, ಪಿ.ಎಸ್. ಕವಲೂರು, ಮಂಜುನಾಥ ಕವಲೂರು, ಶಿವಮೂರ್ತಯ್ಯ ನರಗುಂದಮಠ, ಸಣ್ಣವೀರಪ್ಪ ಮುಸ್ಕಿನಭಾವಿ, ವೀರಪ್ಪ ಅಜಿನಾಳ ಇತರರು ಎಚ್ಚರಿಸಿದ್ದಾರೆ.

# ರಾಮನಾಮ ಜಪದೊಂದಿಗೆ ಅದ್ದೂರಿ ಆಚರಣೆ

## ಶ್ರೀ ಶಂಕರ ಭಾರತಿ ಮಠದಲ್ಲಿ ಶ್ರೀರಾಮನವಮಿ ತೊಟ್ಟಿಲೋತ್ಸವ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀ ಶಂಕರಭಾರತಿಮಠದಲ್ಲಿ ಬ್ರಹ್ಮ ವೃಂದದ ವತಿಯಿಂದ ಶುಕ್ರವಾರ ಶ್ರೀರಾಮನವಮಿ ಅಂಗವಾಗಿ ಶ್ರೀರಾಮನ ತೊಟ್ಟಿಲೋತ್ಸವ ಕಾರ್ಯಕ್ರಮವನ್ನು ಶ್ರದ್ಧಾ–ಭಕ್ತಿಯಿಂದ ಅದ್ದೂರಿಯಾಗಿ ನೆರವೇರಿಸಲಾಯಿತು.

ಶ್ರೀಮಠದಲ್ಲಿ ಸೇರಿದ್ದ ಸುಮಂಗಲೆಯರು ಶ್ರೀರಾಮ ಸ್ವರೂಪದ ಮೂರ್ತಿಯನ್ನು ತೊಟ್ಟಿಲಲ್ಲಿ ಇಟ್ಟು ಭಕ್ತಿಯಿಂದ ತೂಗಿ, ರಾಮನಾಮದ ಭಕ್ತಿಗೀತೆಗಳನ್ನು ಗಾಯನ ಮಾಡಿದರು. ಮಠದ ಆವರಣದಲ್ಲಿ "ಶ್ರೀ ರಾಮ ಜಯ ರಾಮ ಜಯ ಜಯ ರಾಮ" ಎಂಬ ಜಪ ಘೋಷಗಳು ಮೊಳಗಿಸಿ ಭಕ್ತಿಭಾವದ ವಾತಾವರಣ ನಿರ್ಮಾಣವಾಯಿತು.

ಈ ಸಂದರ್ಭದಲ್ಲಿ ತಾಲೂಕು ಬ್ರಾಹ್ಮಣ ಸಮಾಜದ ಅಧ್ಯಕ್ಷ ಕೃಷ್ಣ ಕುಲಕರ್ಣಿ ಹಾಗೂ ಬ್ರಹ್ಮವೃಂದದ ಅಧ್ಯಕ್ಷ ಗೋಪಾಲ ಪಡ್ನೀಸ್ ಮಾತನಾಡಿ, ಶ್ರೀರಾಮನ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಅಗತ್ಯವನ್ನು ಒತ್ತಿ ಹೇಳಿದರು. "ಶ್ರೀರಾಮ ಕೇವಲ ವ್ಯಕ್ತಿಯಲ್ಲ, ಪ್ರತಿಯೊಬ್ಬರ ಬದುಕಿನ ಆದರ್ಶ. ಭಕ್ತಿ, ಶ್ರದ್ಧೆ, ಸತ್ಯ, ಶಾಂತಿ, ಪ್ರೀತಿ ಮತ್ತು ಸಹೋದರತ್ವದ ಮೌಲ್ಯಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಂಡರೆ ಜೀವನ ಸಾರ್ಥಕವಾಗುತ್ತದೆ," ಎಂದು ಅವರು ಹೇಳಿದರು.

ಶ್ರೀರಾಮನು ಧರ್ಮ, ಸಂಸ್ಕಾರ ಮತ್ತು ಮಾನವೀಯತೆಯ ಪ್ರತೀಕವಾಗಿದ್ದು, ಧರ್ಮೋ ರಕ್ಷತಿ ರಕ್ಷಿತಃ ಎಂಬ ಸಂದೇಶವನ್ನು ಯುವಕರು ಅಳವಡಿಸಿಕೊಂಡು ಧರ್ಮರಕ್ಷಣೆಗೆ ಮುಂದಾಗಬೇಕು ಎಂದು ಕರೆ ನೀಡಿದರು. ಸ್ವಧರ್ಮ ನಿಷ್ಠೆ ಹಾಗೂ ಪರಧರ್ಮ ಸಹಿಷ್ಣುತೆ ಎಂಬ ಗುಣಗಳನ್ನು ಬೆಳೆಸಿಕೊಳ್ಳುವುದು ಅವಶ್ಯಕ ಎಂದು ಹೇಳಿದರು.

ಬಳಿಕ ಭಕ್ತರಿಗೆ ಪಾನಕ, ಕೋಸುಂಬರಿ ಹಾಗೂ ಪ್ರಸಾದ ವಿತರಿಸಲಾಯಿತು.

ಈ ಸಂದರ್ಭದಲ್ಲಿ ನಾರಾಯಣಭಟ್ ಪುರಾಣಿಕ, ಗುರುರಾಜ ಪಾಟೀಲ ಕುಲಕರ್ಣಿ, ಆರ್.ಎಚ್. ಕುಲಕರ್ಣಿ, ಎ.ಪಿ. ಕುಲಕರ್ಣಿ, ಅನಂತಭಟ್ ಪೂಜಾರ, ಚಿಕ್ಕರಸ ಪೂಜಾರ, ಗೋಪಾಲ ಕುಲಕರ್ಣಿ, ಡಿ.ಪಿ. ಹೇಮಾದ್ರಿ, ಅರವಿಂದ ದೇಶಪಾಂಡೆ, ದೃವರಾಜ ಬೆಟಗೇರಿ, ನಾಗರಾಜ ಪೂಜಾರ, ಅನಿಲ ಕುಲಕರ್ಣಿ ಸೇರಿದಂತೆ ಬ್ರಾಹ್ಮಣ ಸಮಾಜದ ಮುಖಂಡರು, ನೂರಾರು ಮಹಿಳೆಯರು, ಮಕ್ಕಳು ಹಾಗೂ ಭಕ್ತರು ಉಪಸ್ಥಿತರಿದ್ದರು.

# ವಿಶೇಷ ಮಕ್ಕಳ ಸಮಗ್ರ ಅಭಿವೃದ್ಧಿಗೆ ಜಾಗೃತಿ ಅಗತ್ಯ

## ಸಹಸ್ರಾರ್ಜುನ ಬಿ.ಇಡಿ ಕಾಲೇಜು ಪ್ರಶಿಕ್ಷಣಾರ್ಥಿಗಳಿಂದ ಕ್ಷೇತ್ರ ಅಧ್ಯಯನ ಭೇಟಿ




> "ಹೆಣ್ಣುಮಕ್ಕಳು ಜಾಗೃತರಾಗಿದ್ದು, ಮಕ್ಕಳ ಕಲ್ಯಾಣ ಇಲಾಖೆಯ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಬೇಕು. ಸಮಾಜದಲ್ಲಿ ನಡೆಯುತ್ತಿರುವ ಅಹಿತಕರ ಘಟನೆಗಳನ್ನು ತಡೆಯಲು ಜಾಗೃತಿ ಬಹಳ ಮುಖ್ಯ."
> – **ಜ್ಯೋತಿ ಬಗಡಗೇರಿ,** ಶಕ್ತಿ ಸದನ ಯೋಜನೆಯ ಅಧೀಕ್ಷಕಿ.

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಅರಳು ಗ್ರಾಮೀಣ ಮತ್ತು ನಗರಾಭಿವೃದ್ಧಿ ಸಂಸ್ಥೆಯ ವಿಶೇಷ ಅಗತ್ಯತೆಯುಳ್ಳ ಬುದ್ಧಿಮಾಂದ್ಯ ಮಕ್ಕಳ ಶಾಲೆಗೆ ಗುರುವಾರ ಸಹಸ್ರಾರ್ಜುನ ಬಿ.ಇಡಿ ಕಾಲೇಜಿನ ಪ್ರಶಿಕ್ಷಣಾರ್ಥಿಗಳು ಕ್ಷೇತ್ರ ಅಧ್ಯಯನದ ಅಂಗವಾಗಿ ಭೇಟಿ ನೀಡಿ, ಮಕ್ಕಳಿಗೆ ವಿವಿಧ ವಿಷಯಗಳ ಕುರಿತು ಜಾಗೃತಿ ಮೂಡಿಸಿದರು.

ಈ ಸಂದರ್ಭದಲ್ಲಿ ಪ್ರಶಿಕ್ಷಣಾರ್ಥಿಗಳು ವಿಶೇಷ ಮಕ್ಕಳ ಶಿಕ್ಷಣ, ಶಕ್ತಿ ಸದನ ಯೋಜನೆ ಹಾಗೂ ಲೈಂಗಿಕ ಶಿಕ್ಷಣ (ಸುವಿಧಾ ಸುರಕ್ಷಾ ಕಿಟ್) ಕುರಿತು ಮಾಹಿತಿ ನೀಡಿದರು.

ಶಕ್ತಿ ಸದನ ಯೋಜನೆಯ ಅಧೀಕ್ಷಕಿ ಜ್ಯೋತಿ ಬಗಡಗೇರಿ ಮಾತನಾಡಿ, ಬಾಲ್ಯ ವಿವಾಹ ಹಾಗೂ ಲೈಂಗಿಕ ದೌರ್ಜನ್ಯ ಸಮಸ್ಯೆಗಳ ಬಗ್ಗೆ ಜಾಗೃತಿ ಅಗತ್ಯವಿದೆ ಎಂದು ಹೇಳಿದರು. ಹೆಚ್ಚುತ್ತಿರುವ ಬಾಲ ಗರ್ಭಿಣಿಯರ ಸಂಖ್ಯೆ ಸಮಾಜಕ್ಕೆ ಕಳಂಕವಾಗಿದ್ದು, ಇಂತಹ ಘಟನೆಗಳಿಂದ ಹೆಣ್ಣುಮಕ್ಕಳು ಮತ್ತು ಅವರ ಕುಟುಂಬಗಳು ಸಂಕಷ್ಟ ಅನುಭವಿಸುತ್ತಿವೆ ಎಂದು ಹೇಳಿದರು.

ವಿಶೇಷ ಶಾಲೆಯ ಶಿಕ್ಷಕರಾದ ಲಲಿತಾ ದಾಸಪ್ಪನವರ ಮತ್ತು ಸವಿತಾ ಬೂದಿಹಾಳ ವಿಶೇಷ ಮಕ್ಕಳಿಗೆ ಲೈಂಗಿಕ ಶಿಕ್ಷಣ ನೀಡುವ ವಿಧಾನ ಹಾಗೂ ಅದರ ಮಹತ್ವದ ಬಗ್ಗೆ ವಿವರಿಸಿದರು. ನೇತ್ರಾ ಮತ್ತು ಪವನಕುಮಾರ ಅವರು ವಿಶೇಷ ಮಕ್ಕಳ ಗುರುತಿಸುವಿಕೆ ಮತ್ತು ತಪಾಸಣೆ ಕುರಿತು ಮಾಹಿತಿ ನೀಡಿದರು. ಶಾಲೆಯ ಮುಖ್ಯೋಪಾಧ್ಯಾಯಿನಿ ನೀಲಮ್ಮ ದಾಸಪ್ಪನವರ ಮಾತನಾಡಿ, ಅರಳು ವಿಶೇಷ ಶಾಲೆಯಲ್ಲಿ ಲಭ್ಯವಿರುವ ಸೌಲಭ್ಯಗಳು, ದಾಖಲಾತಿ ವಿಧಾನ ಹಾಗೂ ವಿವಿಧ ಇಲಾಖಾ ಯೋಜನೆಗಳ ಕುರಿತು ವಿವರಿಸಿದರು.

ಈ ಸಂದರ್ಭದಲ್ಲಿ ಸಹಸ್ರಾರ್ಜುನ ಬಿ.ಇಡಿ ಕಾಲೇಜಿನ ಪ್ರಾಂಶುಪಾಲರಾದ ಆರ್.ಎಮ್ ಅಂಗಡಿ, ಉಪನ್ಯಾಸಕರಾದ ಬಿ. ಹಿರೇಮಠ, ಜಿ.ಜಿ. ಹುಬ್ಬಳ್ಳಿ, ಎಸ್.ವಿ. ಯಂಡಿಗೇರಿ, ಬಿ.ಎಂ. ದ್ಯಾವಣ್ಣವರ, ಎಂ.ವೈ. ಮಾಗಳದ, ಲಲಿತಾ, ಸವಿತಾ, ಪ್ರಶಾಂತ, ಪವನಕುಮಾರ, ರಾಜೇಶ್ವರಿ, ಹೇಮಾವತಿ, ಅಕ್ಕಮ್ಮ, ಮುತ್ತು ಮರಲಿಂಗನಗೌಡ್ರ ಹಾಗೂ ವಿಶೇಷ ಮಕ್ಕಳು ಮತ್ತು ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು.

## ರಾಮನಾಮದಲ್ಲಿದೆ ಜೀವನ್ಮುಕ್ತಿ ನೀಡುವ ಶಕ್ತಿ!

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ರಾಮನಾಮ ಎಂಬುದು ಮಹಾಮಂತ್ರ. ಇದರಲ್ಲಿ ಜೀವನ್ಮುಕ್ತಿಯನ್ನು ನೀಡುವ ಶಕ್ತಿ ಅಡಗಿದೆ ಎಂದು ಸಾಹಿತಿ, ನಿವೃತ್ತ ಶಿಕ್ಷಕ ಅರುಣ ಕುಲಕರ್ಣಿ ಹೇಳಿದರು.

ಪಟ್ಟಣದ ಶ್ರೀ ರಾಮದೇವರ ಮಂದಿರದಲ್ಲಿ ಆಚರಿಸಲಾದ ಶ್ರೀ ರಾಮನವಮಿ ಉತ್ಸವದಲ್ಲಿ ಅವರು ಮಾತನಾಡಿದರು.

ಚೈತ್ರ ಶುದ್ಧ ನವಮಿಯ ದಿನ ಶ್ರೀ ರಾಮನ ಜನನವಾಯಿತು. ಶ್ರೀರಾಮನ ಜನನದೊಂದಿಗೆ ಭೂಮಿಯ ಮೇಲೆ ಅನೇಕ ಆದರ್ಶ ಗುಣಗಳು, ಮಾನವೀಯ ಮೌಲ್ಯಗಳು ಮೂಡಿಬಂದವು. ತಂದೆ-ತಾಯಿಯ ಮಾತನ್ನು ಪಾಲಿಸುವುದು ಹೇಗೆ ಎಂಬುದನ್ನು ಶ್ರೀರಾಮನು ಬಾಳಿ ಬದುಕಿ ತೋರಿಸಿದ್ದಾನೆ. ಕೊಟ್ಟ ಮಾತಿನಂತೆ ನಡೆಯುವುದು ಹೇಗೆ ಎಂಬುದನ್ನು ಶ್ರೀ ರಾಮ ನಮಗೆ ಕಲಿಸಿಕೊಟ್ಟಿದ್ದಾನೆ. ವೃದ್ಧಾಶ್ರಮಗಳೆ ಅಧಿಕವಾಗುತ್ತಿರುವ ಇಂದಿನ ದಿನಗಳಲ್ಲಿ ಶ್ರೀ ರಾಮನ ಚರಿತೆ ಎಲ್ಲರಿಗೂ ಒಂದು ಆದರ್ಶವಾಗಿದೆ. ಅದಕ್ಕೆಂದೇ ಶ್ರೀರಾಮನನ್ನು ಮರ್ಯಾದಾ ಪುರುಷೋತ್ತಮ ಎಂದು ಕರೆಯಲಾಗುತ್ತಿದೆ ಎಂದರು.

ಅರ್ಚಕ ಶ್ರೀ ವಲ್ಲಭಭಟ್ಟ ಸದರಜೋಷಿ ಶ್ರೀರಾಮನ ಪೂಜಾ ಕೈಂಕರ್ಯಗಳನ್ನು ನೆರವೇರಿಸಿದರು. ಸುಮಂಗಲೆಯರು ಶ್ರೀರಾಮನನ್ನು ತೊಟ್ಟಿಲಲ್ಲಿ ಹಾಕಿ ಜೋಗುಳ ಹಾಡಿದರು.

ಈ ಸಂದರ್ಭದಲ್ಲಿ ಪ್ರಶಾಂತ ಗ್ರಾಮಪುರೋಹಿತ, ರಾಮಚಂದ್ರ ಕುಲಕರ್ಣಿ, ಹರೀಶ ಕುಲಕರ್ಣಿ, ಪವನ ಕುಲಕರ್ಣಿ, ಎ. ಟಿ. ಮಳ್ಳಳ್ಳಿ, ರಾಮಕೃಷ್ಣ ಸದರಜೋಷಿ, ನಾಗರಾಜ ನಾಡಗೇರ, ನಾಗೇಶ ಭಟ್ಟ ಗ್ರಾಮಪುರೋಹಿತ, ಅಜಿತ ಕುಲಕರ್ಣಿ, ಪ್ರತೀಕ್ಷಾ ಕುಲಕರ್ಣಿ, ಶೋಭಾ ಕುಲಕರ್ಣಿ, ಶೋಭಾ ಸೂರಭಟ್ಟನವರ, ಸೀಮಾ ಕೊಂಡಿ, ಅರ್ಚನಾ ಕುಲಕರ್ಣಿ, ರಾಜಶ್ರೀ ಕುಲಕರ್ಣಿ, ಅಶ್ವಿನಿ ನವಲಿ, ಭಾರತಿ ಯಲಿಗಾರ, ಮಂಜುಳಾ ಇಂಗಳಳ್ಳಿ, ಹೇಮಾ ನಿರಂಜನ, ಸುರೇಖಾ ನಿರಂಜನ, ಶ್ರಾವಣಿ ನಾಗಾರ್ಜುನ, ಜಯಶ್ರೀ ಗ್ರಾಮಪುರೋಹಿತ, ಸನ್ಮತಿ ಸದರಜೋಷಿ, ಪ್ರಿಯಾ ಕುಲಕರ್ಣಿ, ವಿಮಲಾಬಾಯಿ ಗ್ರಾಮಪುರೋಹಿತ, ಜ್ಯೋತಿ ನಾಡಗೇರ, ಪರಿಮಳಾ ಗ್ರಾಮಪುರೋಹಿತ, ನಿಖಿತಾ ಗ್ರಾಮಪುರೋಹಿತ ಮತ್ತಿತರರು ಉಪಸ್ಥಿತರಿದ್ದರು.

# ಜಾತ್ರೆಯಲ್ಲಿ ಯುವಕರ ಶಕ್ತಿ ಪ್ರದರ್ಶನಕ್ಕೆ ಗ್ರಾಮವೇ ಸಾಕ್ಷಿ!

## ಮೂರು ತಲೆಮಾರಿನ ಸಂಪ್ರದಾಯ ಮುಂದುವರಿಸಿದ ಚಿಗರಿ ಕುಟುಂಬ!



"ಇಂತಹ ಶಕ್ತಿ ಪ್ರದರ್ಶನಗಳು ಯುವಕರನ್ನು ದುಶ್ಚಟಗಳಿಂದ ದೂರವಿಟ್ಟು ಸನ್ಮಾರ್ಗದಲ್ಲಿ ಸಾಗಿಸಲು ಸಹಕಾರಿಯಾಗುತ್ತವೆ"

– ವಲಮಪ್ಪ ಬಸಪ್ಪ ಧರಣಿ,

■ವಿಜಯಸಾಕ್ಷಿ ಸುದ್ದಿ, ಗದಗ

ಜಂತ್ಲಿ-ಶಿರೂರು ಗ್ರಾಮದಲ್ಲಿ ನಡೆದ ಶ್ರೀ ಮಾರುತಿದೇವರ ಜಾತ್ರಾ ಮಹೋತ್ಸವ ಈ ಬಾರಿ ಯುವಕರ ಅದ್ಭುತ ಶಕ್ತಿ ಪ್ರದರ್ಶನದಿಂದ ವಿಶೇಷ ಮೆರುಗು ಪಡೆದುಕೊಂಡಿತು.

ಮಾಜಿ ಪೈಲ್ವಾನ್ ಪರಮೇಶ್ವರಪ್ಪ ನಾಗಪ್ಪ ಚಿಗರಿ ಅವರ ಮಾರ್ಗದರ್ಶನದಲ್ಲಿ ಶ್ರೀರಾಮ ವಾಲ್ಮೀಕಿ ಯುವಕ ಮಂಡಳದ ಯುವಕರಾದ ಹನಮಂತ ನಿಂಗಪ್ಪ ಹುಯಿಲಗೋಳ, ನಾಗರಾಜ ಪರಮೇಶ್ವರಪ್ಪ ಚಿಗರಿ ಹಾಗೂ ವಿಜಯಕುಮಾರ ಫಕೀರಪ್ಪ ಹುಯಿಲಗೋಳ ಅವರು ಗೋಧಿ ಚೀಲವನ್ನು ಹೊತ್ತು ದೀಡನಮಸ್ಕಾರ ಮಾಡುವ ಮೂಲಕ ತಮ್ಮ ಶಕ್ತಿ ಮತ್ತು ಭಕ್ತಿಯನ್ನು ಪ್ರದರ್ಶಿಸಿದರು.

ಶ್ರೀ ಬಸವೇಶ್ವರ ದೇವಸ್ಥಾನದಿಂದ ಶ್ರೀ ಮಾರುತಿ ದೇವಸ್ಥಾನದವರೆಗೆ ಗೋಧಿ ಚೀಲ ಮತ್ತು ಉಸುಕಿನ ಕೊಡವನ್ನು ಹೊತ್ತು ದೀಡನಮಸ್ಕಾರ ಮಾಡುವ ದೃಶ್ಯ ಗ್ರಾಮಸ್ಥರ ಗಮನ ಸೆಳೆಯಿತು. ಯುವಕರ ಈ ಸಾಹಸಿಕ ಪ್ರದರ್ಶನವು ಗ್ರಾಮದಲ್ಲಿ ಹೆಮ್ಮೆ ಹಾಗೂ ಭಕ್ತಿಭಾವದ ವಾತಾವರಣವನ್ನು ಸೃಷ್ಟಿಸಿತು.

ಈ ಶಕ್ತಿ ಪ್ರದರ್ಶನವು ಕೇವಲ ಒಂದು ಕಾರ್ಯಕ್ರಮವಾಗಿರದೆ, ಮೂರು ತಲೆಮಾರಿನಿಂದ ಮುಂದುವರಿದಿರುವ ಸಂಪ್ರದಾಯದ ಸಂಕೇತವಾಗಿದೆ. ದಿವಂಗತ ನಾಗಪ್ಪ ಕಲ್ಲಪ್ಪ ಚಿಗರಿ ಅವರು ಆರಂಭಿಸಿದ ಈ ಪರಂಪರೆಯನ್ನು ಅವರ ಮಗ ಪರಮೇಶ್ವರಪ್ಪ ಚಿಗರಿ ಮುಂದುವರೆಸಿದ್ದು, ಇದೀಗ ಅವರ ಮಗ ನಾಗರಾಜ ಚಿಗರಿ ಅದನ್ನು ಮತ್ತಷ್ಟು ಬಲಪಡಿಸಿದ್ದಾರೆ.

ಯುವಕರನ್ನು ದುಶ್ಚಟಗಳಿಂದ ದೂರವಿಟ್ಟು ಸನ್ಮಾರ್ಗದಲ್ಲಿ ಸಾಗಿಸಲು ಇಂತಹ ಕಾರ್ಯಕ್ರಮಗಳು ಪ್ರೇರಣೆಯಾಗುತ್ತವೆ ಎಂಬ ಅಭಿಪ್ರಾಯ ವ್ಯಕ್ತವಾಯಿತು. ವಲಮಪ್ಪ ಬಸಪ್ಪ ಧರಣಿ ಅವರ ಮಾರ್ಗದರ್ಶನ ಹಾಗೂ ಖಾಸೀಮಸಾಬ ನದಾಫ್ ಸೇರಿದಂತೆ ಗ್ರಾಮಸ್ಥರ ಪ್ರೋತ್ಸಾಹ ಈ ಕಾರ್ಯಕ್ರಮಕ್ಕೆ ಮತ್ತಷ್ಟು ಉತ್ತೇಜನ ನೀಡಿತು.

ಕಾರ್ಯಕ್ರಮದಲ್ಲಿ ಗ್ರಾಮದ ಯುವಕರು, ಹಿರಿಯರು, ಮಾರುತಿ ದೇವಸ್ಥಾನದ ಭಕ್ತರು ಹಾಗೂ ಭಜನಾ ಮಂಡಳಿಗಳ ಸದಸ್ಯರು ಭಾರಿ ಸಂಖ್ಯೆಯಲ್ಲಿ ಭಾಗವಹಿಸಿ ಜಾತ್ರೆಯನ್ನು ಯಶಸ್ವಿಗೊಳಿಸಿದರು.

## ನಕಾರಾತ್ಮಕ ಚಿಂತನೆ ನಿವಾರಣೆಗೆ ಪಿರಮಿಡ್ ಧ್ಯಾನ ಪರಿಣಾಮಕಾರಿ!



ನಿತ್ಯದ ಬದುಕಿನಲ್ಲಿ ಪಿರಮಿಡ್ ಧ್ಯಾನ ಮತ್ತು ಸತ್ಸಂಗ ಅಳವಡಿಸಿಕೊಂಡರೆ ಮನಸ್ಸಿನ ಶುದ್ಧೀಕರಣ ಜೊತೆಗೆ ದೇಹಕ್ಕೆ ಶಕ್ತಿ, ಹೊಸ ಚೈತನ್ಯ ಲಭಿಸುತ್ತದೆ.–

– ಬ್ರಹ್ಮಶ್ರೀ ಪ್ರೇಮ್ ನಾಥ್ ಗುರೂಜಿ.

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಿರಮಿಡ್ ಧ್ಯಾನದಿಂದ ಮನಸ್ಸಿನಲ್ಲಿನ ದ್ವೇಷ, ಕೋಪ, ಚಂಚಲತೆ, ನಕಾರಾತ್ಮಕ ಚಿಂತನೆಗಳು ತೊಲಗಿ ಶಾಂತ, ಪರಿಶುದ್ಧ, ಸದ್ಭಾವನೆ, ನಿರ್ಮಲತೆ ಪ್ರಾಪ್ತವಾಗುತ್ತದೆ ಎಂದು ಬೆಂಗಳೂರಿನ ಬ್ರಹ್ಮಶ್ರೀ ಪ್ರೇಮ್ ನಾಥ್ ಗುರೂಜಿ ಹೇಳಿದರು.

ಪಟ್ಟಣದ ಶ್ರೀ ಚನ್ನಮ್ಮನ ವನ ಕಲ್ಯಾಣ ಮಂಟಪದಲ್ಲಿ ಗದಗನ ಪಿರಮಿಡ್ ಸ್ಪಿರುಚ್ಯುವಲ್ ಸೊಸೈಟಿ, ಲಕ್ಷ್ಮೇಶ್ವರ ಧ್ಯಾನ ವ್ಯವಸಾಯ ಸತ್ಸಂಗ ಪರಿವಾರದ ಸಹಯೋಗದಲ್ಲಿ ನಡೆದ ಧ್ಯಾನ ವ್ಯವಸಾಯ ಹಾಗೂ ಸತ್ಸಂಗ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಉಸಿರಾಟದೊಂದಿಗಿನ ಈ ಪಿರಮಿಡ್ ಧ್ಯಾನವು ದೇಹದೊಳಗಿನ ವಿಶ್ವಶಕ್ತಿಯನ್ನು ಉದ್ದೀಪನಗೊಳಿಸುತ್ತದೆ. ಒಟ್ಟಿನಲ್ಲಿ ಪಿರಮಿಡ್ ಧ್ಯಾನವು ದೈಹಿಕ, ಮಾನಸಿಕ ಮತ್ತು ಆಧ್ಯಾತ್ಮಿಕ ಯೋಗಕ್ಷೇಮವನ್ನು ಉತ್ತೇಜಿಸುವ ಒಂದು ಸಮಗ್ರ ಅಭ್ಯಾಸವಾಗಿದೆ. ಮಕ್ಕಳು, ಶಿಕ್ಷಕರು, ಕೃಷಿಕರು, ವ್ಯಾಪಾರಸ್ಥರು ಸೇರಿ ಎಲ್ಲ ವರ್ಗದ ಜನರೂ ಸಹ ಬಿಡುವಿನ ವೇಳೆಯಲ್ಲಿ ಪಿರಮಿಡ್ ಧ್ಯಾನವನ್ನು ಅಳವಡಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಲಕ್ಷ್ಮೇಶ್ವರದ ಯುವಮುಖಂಡ ಆನಂದಸ್ವಾಮಿ ಗಡ್ಡದೇವರಮಠ, ಪಿರಮಿಡ್ ಧ್ಯಾನ ಮತ್ತು ಸತ್ಸಂಗ ಕಾರ್ಯಕ್ರಮದಿಂದ ದೈಹಿಕ, ಮಾನಸಿಕ ಮತ್ತು ಆಧ್ಯಾತ್ಮಿಕ ಶಾಂತಿ, ನೆಮ್ಮದಿ ಪ್ರಾಪ್ತವಾಗುತ್ತದೆ. ಈ ನಿಟ್ಟಿನಲ್ಲಿ ಪಿರಮಿಡ್ ಧ್ಯಾನ ಬದುಕಿನ ಭಾಗವಾಗಬೇಕು ಎಂದರು.

ಅತಿಥಿಗಳಾದ ಬಾಚಿಗೊಂಡನ ಹಳ್ಳಿಯ ನಾಗರಾಜ್ ನಾಣಿಕೆರೆ ಧ್ಯಾನದಿಂದ ರೈತರು ಹೇಗೆ ಸಮೃದ್ಧವಾದ ವ್ಯವಸಾಯ ಮಾಡಬಹುದು, ಯಾವುದೇ ರಾಸಾಯನಿಕಗಳಿಲ್ಲದೆಯೇ ಸಾವಯವ ಕೃಷಿಯಿಂದ ಬೆಳೆಯನ್ನ ಸಮೃದ್ಧವಾಗಿ ಹೇಗೆ ಬೆಳೆಯುವುದು, ಬೆಳೆಗೆ ಸರಿಯಾದ ಬೆಲೆಯನ್ನ ಕೇವಲ ಧ್ಯಾನ ಮಾತ್ರದಿಂದ ಸಂಕಲ್ಪ ಶಕ್ತಿಯಿಂದ ಹೇಗೆ ಪಡೆದುಕೊಳ್ಳುವುದು ಎನ್ನುವುದರ ಬಗ್ಗೆ ಮಾರ್ಗದರ್ಶನ ನೀಡಿದರು.

ರಮೇಶ ಹಳ್ಳಿಕೇರಿ ಅವರು ರೈತರು ಹಾಗೂ ಶಿಕ್ಷಕರು ಧ್ಯಾನದಿಂದ ತಮ್ಮ ವೃತ್ತಿ ಹಾಗೂ ವ್ಯವಸಾಯದಲ್ಲಿ ಹೇಗೆ ಪ್ರಗತಿ ಸಾಧಿಸಿದ್ದಾರೆ ಎನ್ನುವ ಉದಾಹರಣೆಗಳ ಮೂಲಕ ತಮ್ಮ ಜೀವನದ ಅನುಭವಗಳನ್ನು ಹಂಚಿಕೊಡರು.

ಸಂಘಟಕರಾದ ಸುಭಾಷ್ ಓದುನವರ ಅವರು ಲಕ್ಷ್ಮೇಶ್ವರ ಭಾಗದಲ್ಲಿ ಪಿರಮಿಡ್ ಧ್ಯಾನ, ಸತ್ಸಂಗ ಕಾರ್ಯಕ್ರಮಕ್ಕೆ ಸಹಾಯ-ಸಹಕಾರ ನೀಡುವುದಾಗಿ ಹೇಳಿದರು.

ಈ ವೇಳೆ ಮಾಜಿ ಶಾಸಕರಾದ ಜಿ.ಎಸ್ ಗಡ್ಡದೇವರಮಠ, ರಾಮಣ್ಣ ಲಮಾಣಿ, ದೇವಣ್ಣ ಬಳಿಗಾರ, ಪಿರಮಿಡ್ ಸ್ಪಿರುಚ್ಯುವಲ್ ಸೊಸೈಟಿಯ ಪೂರ್ಣಿಮಾಜಿ, ವಿಶಾಲಾಕ್ಷಿ ಜಿ, ಈರಣ್ಣ ಅಂಕಲಕೋಟಿ, ಶರಣಪ್ಪ ಗುಳಗಣ್ಣವರ, ನಿರ್ಮಲಾ ಅರಳಿ, ಅನ್ನಪೂರ್ಣ ಓದುನವರ ಸೇರಿ ಅನೇಕರು ಹಾಜರಿದ್ದರು.

## ಅರ್ಥಪೂರ್ಣ ಜಯಂತ್ಯುತ್ಸವ ಆಚರಣೆಗೆ ನಿರ್ಧಾರ

### ಶಿಕ್ಷಣ ಕ್ಷೇತ್ರದಲ್ಲಿ ಸಾಧನೆಗೈದವರಿಗೆ ಸನ್ಮಾನ-ಚಂದ್ರಶೇಖರ ಕಂದಕೂರ



■ವಿಜಯಸಾಕ್ಷಿ ಸುದ್ದಿ, ರೋಣ

ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಹಸಿರು ಕ್ರಾಂತಿ ಹರಿಕಾರ ಡಾ. ಬಾಬು ಜಗಜೀವನರಾಮ್ ರವರ ಜೀವನ ಚರಿತ್ರೆ ಕುರಿತು ಈ ಬಾರಿ ಎ 8 ರಂದು ಪ್ರಬಂಧ ಸ್ಪರ್ಧೆ ಏರ್ಪಡಿಸಲಾಗಿದ್ದು, 10 ಮತ್ತು 12 ನೇ ತರಗತಿ ವಿದ್ಯಾರ್ಥಿಗಳು ಭಾಗವಹಿಸಬಹುದು ಎಂದು ತಾಪಂ ಇಒ ಚಂದ್ರಶೇಖರ ಕಂದಕೂರ ತಿಳಿಸಿದ್ದಾರೆ.

ಶುಕ್ರವಾರ ತಹಸೀಲ್ದಾರ್ ಕಚೇರಿ ಸಭಾಂಗಣದಲ್ಲಿ ಜರುಗಿದ ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಡಾ. ಬಾಬು ಜಗಜೀವನರಾಮ್ ರವರ ಜನ್ಮ ದಿನಾಚರಣೆಯ ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಇಬ್ಬರು ದೇಶದ ಪ್ರತಿಯೊಬ್ಬ ಪ್ರಜೆಗೂ ಬೇಕಾದ ಮಹಾನ್ ಚೇತನಗಳು. ಹೀಗಾಗಿ ಅವರ ಜೀವನ ಚರಿತ್ರೆ ಮತ್ತು ಸಾಧನೆ ಜೊತೆಗೆ ಅವರು ದೇಶಕ್ಕೆ ನೀಡಿದ ಕೊಡುಗೆಯನ್ನು ನಾವೆಲ್ಲರೂ ತಿಳಿದುಕೊಳ್ಳುವುದು ಅವಶ್ಯಕವಾಗಿದೆ. ಈ ನಿಟ್ಟಿನಲ್ಲಿ ಈ ಬಾರಿ ತಾಲ್ಲೂಕು ಆಡಳಿತ ಹೊಸ ಚಿಂತನೆ ನಡೆಸಿ ಪ್ರಬಂಧ ಸ್ಪರ್ಧೆಯನ್ನು ಏರ್ಪಡಿಸಲು ಸಿದ್ಧತೆ ನಡೆಸಿದ್ದು, ಎ. 8 ರಂದು ಪಟ್ಟಣದ ವಿ.ಎಫ್. ಪಾಟೀಲ ಶಾಲೆಯಲ್ಲಿ ಜರುಗುವ ಈ ಸ್ಪರ್ಧೆಯಲ್ಲಿ 10 ಮತ್ತು 12 ನೇ ತರಗತಿ ವಿದ್ಯಾರ್ಥಿಗಳು ಭಾಗವಹಿಸಬೇಕು ಎಂದರು. ಸ್ಪರ್ಧೆಯಲ್ಲಿ ವಿಜೇತರಾದ ತಲಾ ಮೂವರಿಗೆ ಆಕರ್ಷಕ ಬಹುಮಾನಗಳನ್ನು ವಿತರಿಸಲಾಗುವುದು ಎಂದರು.

ತಹಸೀಲ್ದಾರ್ ನಾಗರಾಜ ಕೆ. ಮಾತನಾಡಿ, ದೇಶ ಕಂಡಿರುವ ಅಪ್ರತಿಮ ಚೇತನಗಳ ಜನ್ಮ ದಿನಾಚರಣೆಗಳನ್ನು ಪ್ರತಿ ವರ್ಷದಂತೆ ಈ ವರ್ಷ ಕೂಡ ಅತ್ಯಂತ ವಿಜೃಂಭಣೆಯಿಂದ ಆಚರಿಸಲು ಆಡಳಿತ ವ್ಯವಸ್ಥೆ ನಿರ್ಧರಿಸಿದೆ. ಅಲ್ಲದೆ ಈ ಬಾರಿ ಕೆಲ ಬದಲಾವಣೆಗಳನ್ನು ಮಾಡಿಕೊಂಡು ಪ್ರಬಂಧ ಸ್ಪರ್ಧೆಗಳನ್ನು ಸಹ ಹಮ್ಮಿಕೊಂಡಿದೆ. ಹೀಗಾಗಿ ವಿದ್ಯಾರ್ಥಿಗಳು ಇದರ ಲಾಭ ಪಡೆಯಬೇಕು. ಮುಖ್ಯವಾಗಿ ಸಮಾಜದ ಹಿರಿಯರು ಸೂಚಿಸಿದಂತೆ ಎ. 14 ರಂದು ಮಹನೀಯರುಗಳು ಜನ್ಮ ದಿನಾಚರಣೆ ಆಚರಿಸಲು ಸಿದ್ಧರಾಗಿದ್ದಾರೆ. ಸರಕಾರದ ಆದೇಶದಂತೆ ಎ. 5 ರಂದು ಡಾ. ಬಾಬು ಜಗಜೀವನರಾಮ್ ರವರ ಜನ್ಮ ದಿನಾಚರಣೆಯನ್ನು ಕಚೇರಿಯಲ್ಲಿ ಆಚರಿಸಲಾಗುವುದು. ಇದರಲ್ಲಿ ಸಮಾಜದ ಮುಖಂಡರು ಮತ್ತು ಸಾರ್ವಜನಿಕರು ಭಾಗಿಯಾಗಬೇಕು ಎಂದರು.

ಇನ್ನು 10 ಮತ್ತು 12 ನೇ ತರಗತಿಯಲ್ಲಿ ಉತ್ತಮ ಅಂಕಗಳನ್ನು ಪಡೆದಿರುವ ಸಮಾಜದ ವಿದ್ಯಾರ್ಥಿಗಳಿಗೆ ಸನ್ಮಾನ ಜೊತೆಗೆ ನುರಿತ ಸಾಹಿತಿಗಳಿಂದ ಉಪನ್ಯಾಸ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಮೆರವಣಿಗೆ ಸಿದ್ದರೂಢ ಮಠದಿಂದ ಎ.14 ರಂದು ಬೆಳಿಗ್ಗೆ 9 ಕ್ಕೆ ಹೊರಡಲಿದ್ದು, ಅಲ್ಲಿ ಸಮಾಜದವರು ಸೇರಿದಂತೆ ಸಾರ್ವಜನಿಕರು ಭಾಗಿಯಾಗಿ ಮಹಾನ್ ಚೇತನಗಳ ಭವ್ಯ ಮೆರವಣಿಗೆಗೆ ವಿಶೇಷ ಮೆರಗು ನೀಡಬೇಕು ಎಂದರು. ತಾಲ್ಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಕಡ್ಡಾಯವಾಗಿ ಹಾಜರಿರಬೇಕು ಎಂದು ಸೂಚಿಸಿದರು.

ಸಿಪಿಐ ವಿಜಯಕುಮಾರ, ಸಮಾಜ ಕಲ್ಯಾಣ ಇಲಾಖೆಯ ಗೀತಾ ಆಲೂರು, ಪಿಎಸ್ಐ ಪ್ರಕಾಶ ಬಣಕಾರ, ಅಕ್ಷರದಾಸೋಹಾಧಿಕಾರಿ ಆರ್.ಎಲ್. ನಾಯಕ, ಎಂಆರ್‌ಬಿಸಿ ಇಇ ಜಗದೀಶ್, ಸಂಜಯ ದೊಡ್ಡಮನಿ, ಸೋಮು ನಾಗರಾಜ, ಬಸವರಾಜ ತಳವಾರ, ದೇವಂದ್ರಪ್ಪ, ನಿಂಗಪ್ಪ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಪ್ರಿಪೇಯ್ಡ್ ಸ್ಮಾರ್ಟ್ ಮೀಟರ್ ಅಳವಡಿಕೆಗೆ ರೈತ ಸಂಘ ಗರಂ

### "ರೈತರಿಗೆ ಭಾರಿ ಹೊರೆ" ಎಂದ ಜೆ.ಎಂ. ವೀರಸಂಗಯ್ಯ



■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಪ್ರಿಪೇಯ್ಡ್ ಸ್ಮಾರ್ಟ್ ಮೀಟರ್ ಅಳವಡಿಕೆಯಿಂದ ರಾಜ್ಯದ ಬಡವರು ಹಾಗೂ ರೈತರಿಗೆ ಭಾರಿ ಅನಾನುಕೂಲ ಉಂಟಾಗಲಿದೆ ಎಂದು ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯ ಕಾರ್ಯಾಧ್ಯಕ್ಷ ಜೆ.ಎಂ. ವೀರಸಂಗಯ್ಯ ಆತಂಕ ವ್ಯಕ್ತಪಡಿಸಿದರು.

ಪಟ್ಟಣದ ಕೃಷಿಕ ಭವನದಲ್ಲಿ ನಡೆದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಅವರು, ಭಾಗ್ಯ ಜ್ಯೋತಿ ಮತ್ತು ಕುಟೀರ ಜ್ಯೋತಿ ಯೋಜನೆಗಳಡಿ ರಿಯಾಯಿತಿ ವಿದ್ಯುತ್ ಪಡೆಯುತ್ತಿರುವ 1.7 ಕೋಟಿಗೂ ಹೆಚ್ಚು ಬಡ ಕುಟುಂಬಗಳು ಈ ಕ್ರಮದಿಂದ ಕತ್ತಲೆಗೆ ತಳ್ಳಲ್ಪಡುವ ಸಾಧ್ಯತೆ ಇದೆ ಎಂದು ಎಚ್ಚರಿಸಿದರು.

ಕೇಂದ್ರ ಸರ್ಕಾರ ವಿದ್ಯುತ್ ಕಾಯ್ದೆ 2025ರಲ್ಲಿ ತಿದ್ದುಪಡಿ ಮಾಡಿ ಖಾಸಗೀಕರಣಕ್ಕೆ ಮುಂದಾಗಿರುವುದು ಜನಸಾಮಾನ್ಯರಿಗೆ ಹೊಡೆತ ನೀಡಲಿದೆ. ಖಾಸಗಿ ಕಂಪನಿಗಳ ಗುರಿ ಲಾಭವಷ್ಟೇ ಆಗಿರುವುದರಿಂದ ಗೃಹ ಬಳಕೆ, ಕೈಗಾರಿಕೆ ಹಾಗೂ ಕೃಷಿ ಕ್ಷೇತ್ರಗಳಿಗೆ ದುಬಾರಿ ವಿದ್ಯುತ್ ಭಾರವಾಗಲಿದೆ ಎಂದು ಅವರು ಆರೋಪಿಸಿದರು.

ಇದುವರೆಗೆ ರಾಜ್ಯದಲ್ಲಿ ರೈತರ ಹೋರಾಟಗಳ ಫಲವಾಗಿ 10 ಎಚ್.ಪಿ. ಪಂಪ್‌ಸೆಟ್‌ಗಳವರೆಗೆ ಉಚಿತ ವಿದ್ಯುತ್ ನೀಡಲಾಗುತ್ತಿತ್ತು. ಆದರೆ ಈಗ ಖಾಸಗೀಕರಣದ ಪರಿಣಾಮವಾಗಿ 1 ಎಚ್.ಪಿ.ಗೆ 150 ವಿಧಿಸುವ ಸಾಧ್ಯತೆ ಇದ್ದು, ಇದು ರೈತರಿಗೆ ಹೆಚ್ಚುವರಿ ಆರ್ಥಿಕ ಒತ್ತಡ ತರಲಿದೆ ಎಂದು ಹೇಳಿದರು.

ಪ್ರಿಪೇಯ್ಡ್ ಮೀಟರ್ ವ್ಯವಸ್ಥೆಯಲ್ಲಿ ಮೊಬೈಲ್ ರೀಚಾರ್ಜ್ ಮಾಡುವ ರೀತಿಯಲ್ಲಿ ಮೊತ್ತವನ್ನು ಮುಂಚಿತವಾಗಿ ಠೇವಣಿ ಇಡಬೇಕಾಗುತ್ತದೆ. ಕನಿಷ್ಠ 5000 ಠೇವಣಿ ಇಟ್ಟು ನಂತರ ವಿದ್ಯುತ್ ಬಳಸಬೇಕಾಗುತ್ತದೆ. ಬ್ಯಾಲೆನ್ಸ್ ಮುಗಿದರೆ ವಿದ್ಯುತ್ ಕಡಿತವಾಗುತ್ತದೆ. ಇದರಿಂದ ಹೊಲಗಳಲ್ಲಿ ಮೋಟರ್ ನಿಲ್ಲುವ ಸ್ಥಿತಿ ಉಂಟಾಗಿ ರೈತರು ಸಂಕಷ್ಟಕ್ಕೆ ಸಿಲುಕುತ್ತಾರೆ ಎಂದು ಅವರು ಆತಂಕ ವ್ಯಕ್ತಪಡಿಸಿದರು.

ಜೇಸ್ಕಾಂ ಹೊರಡಿಸಿರುವ ಸರ್ಕ್ಯುಲರ್ ಪ್ರಕಾರ, 2026ರ ಮಾರ್ಚ್ 1ರಿಂದ ಹೊಸ ಹಾಗೂ ತಾತ್ಕಾಲಿಕ ಸಂಪರ್ಕಗಳಿಗೆ ಕಡ್ಡಾಯವಾಗಿ ಸ್ಮಾರ್ಟ್ ಮೀಟರ್ ಅಳವಡಿಕೆ ಮತ್ತು ಪ್ರಿಪೇಯ್ಡ್ ಬಿಲ್ಲಿಂಗ್ ಜಾರಿಯಾಗಲಿದೆ.

ಹಾಲಿ ಗ್ರಾಹಕರೂ ತಮ್ಮ ವೆಚ್ಚದಲ್ಲಿ ಹಳೆಯ ಮೀಟರ್ ಬದಲಿಸಿ ಸ್ಮಾರ್ಟ್ ಮೀಟರ್ ಅಳವಡಿಸಿಕೊಳ್ಳಬೇಕಾಗಿದೆ ಎಂದು ತಿಳಿಸಿದರು.

ಈ ಕ್ರಮಗಳನ್ನು ವಿರೋಧಿಸಿ ಮುಂದಿನ ದಿನಗಳಲ್ಲಿ ರೈತಪರ ಹೋರಾಟವನ್ನು ಹಮ್ಮಿಕೊಳ್ಳಲಾಗುತ್ತದೆ ಎಂದು ವೀರಸಂಗಯ್ಯ ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಅಧ್ಯಕ್ಷ ಎ. ಆಂಜಿನೇಯ, ಯುವ ಘಟಕದ ಅಧ್ಯಕ್ಷ ಟಿ. ರವಿಕುಮಾರ್, ಗೌರವಾಧ್ಯಕ್ಷ ಬಾಣದ ಶಿವಪ್ಪ, ರಾಜಭಕ್ಷಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಎಸ್‌ಎಸ್‌ಕೆ ಮಹಿಳಾ ಮಂಡಳದಿಂದ ಮಹಿಳಾ ದಿನಾಚರಣೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಎಸ್.ಎಸ್.ಕೆ. ಶ್ರೀ ಜಗದಂಬಾ ಮಹಿಳಾ ಮಂಡಳ, ಬೆಟಗೇರಿ ಹಾಗೂ ಎಸ್.ಎಸ್.ಕೆ. ಸಮಾಜ, ಬೆಟಗೇರಿ ಇವರ ಸಂಯುಕ್ತ ಆಶ್ರಯದಲ್ಲಿ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಇಂದು ರವಿವಾರ ಸಂಜೆ 7 ಗಂಟೆಗೆ ಬೆಟಗೇರಿಯ ಶ್ರೀ ಅಂಬಾ ಭವಾನಿ ದೇವಸ್ಥಾನದ ಶ್ರೀಮತಿ ಮುನ್ನೂಬಾಯಿ ಈಶ್ವರಸಾ ಖೋಡೆ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಸ್.ಎಸ್.ಕೆ. ಶ್ರೀ ಜಗದಂಬಾ ಮಹಿಳಾ ಮಂಡಳದ ಅಧ್ಯಕ್ಷರಾದ ಶ್ರೀಮತಿ ಸರೋಜಾ ಹೇಮಾಸಾ ಕಬಾಡಿ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಶಿಕ್ಷಕಿಯರಾದ ಶ್ರೀಮತಿ ಶೈಲಾ ಎಸ್. ಶಿರೋಳ, ಶ್ರೀಮತಿ ವಿಜಯಲಕ್ಷ್ಮಿ ಬದಿ ಹಾಗೂ ಗದಗ ಎಸ್.ಎಸ್.ಕೆ. ಸಮಾಜದ ಮಹಿಳಾ ಮಂಡಳದ ಅಧ್ಯಕ್ಷರಾದ ಶ್ರೀಮತಿ ಸ್ನೇಹಲತಾ ಪಿ. ಕಬಾಡಿ ಭಾಗವಹಿಸಲಿದ್ದಾರೆ.

ಅತಿಥಿಗಳಾಗಿ ಎಸ್.ಎಸ್.ಕೆ. ಪಂಚ ಟ್ರಸ್ಟ್ ಕಮಿಟಿಯ ಅಧ್ಯಕ್ಷ ಲೋಕನಾಥ ಕಬಾಡಿ ಹಾಗೂ ತರುಣ ಸಂಘದ ಅಧ್ಯಕ್ಷ ನಾರಾಯಣಸಾ ಕಬಾಡಿ ಉಪಸ್ಥಿತರಿರುವರು. ಕಾರ್ಯಕ್ರಮದಲ್ಲಿ ಮಹಿಳೆಯರಿಗಾಗಿ ವಿವಿಧ ಸ್ಪರ್ಧೆಗಳು, ಬಹುಮಾನ ವಿತರಣೆ, ಮುಖ್ಯ ಅತಿಥಿಗಳ ಸನ್ಮಾನ ನಡೆಯಲಿದೆ. ಇದೇ ವೇಳೆ ಶ್ರೀಮತಿ ಸಾವಿತ್ರಿಬಾಯಿ ಕಾಟವಾ ಅವರ ಸಮಾಜಸೇವೆಯನ್ನು ಪರಿಗಣಿಸಿ ವಿಶೇಷ ಸನ್ಮಾನ ಕೂಡ ಜರುಗಲಿದೆ. ಆದ್ದರಿಂದ ಬೆಟಗೇರಿ ಎಸ್.ಎಸ್.ಕೆ. ಪಂಚ ಟ್ರಸ್ಟ್ ಕಮಿಟಿ, ತರುಣ ಸಂಘ, ಮಹಿಳಾ ಮಂಡಳದ ಸದಸ್ಯರು ಹಾಗೂ ಗದಗ-ಬೆಟಗೇರಿ ಎಸ್.ಎಸ್.ಕೆ. ಸಮಾಜದ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲು ಕೋರಲಾಗಿದೆ.

## ನಿಧನ

### ಸರ್ದಾರ್ ರಾಮಮ್ಮ



**ಹಗರಿಬೊಮ್ಮನಹಳ್ಳಿ:** ಪಟ್ಟಣದ ರಾಮನಗರ ರೈತರ ಓಣಿಯ ಸರ್ದಾರ್ ರಾಮಮ್ಮ (95) ಶನಿವಾರ ನಿಧನರಾದರು. ಮೃತರು ಮೂವರು ಪುತ್ರಿಯರು, ಓರ್ವ ಪುತ್ರ ಮೊಮ್ಮಕ್ಕಳು, ಮರಿ ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.

ಮೃತರ ಅಂತ್ಯಕ್ರಿಯೆ ಮಾರ್ಚ್ 29 ಭಾನುವಾರ ಬೆಳಿಗ್ಗೆ 11 ಗಂಟೆಗೆ ನಡೆಯಲಿದೆ ಎಂದು ಕುಟುಂಬದವರು ತಿಳಿಸಿದ್ದಾರೆ.

## ಗದಗ ಆನ್‌ಲೈನ್‌ನಿಂದ ಉಚಿತ ಮಜ್ಜಿಗೆ ವಿತರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಆನ್‌ಲೈನ್ ತಂಡದಿಂದ ಶನಿವಾರದಂದು ಉಚಿತ ಮಜ್ಜಿಗೆ ವಿತರಣಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಗದಗ ಆನ್‌ಲೈನ್‌ನ ಗದಗ ಕೆಫೆ - 26 ನಗರದ ಸ್ಟೇಷನ್ ರಸ್ತೆಯಲ್ಲಿದ್ದು ಈ ರಸ್ತೆಯಲ್ಲಿ ಸಂಚರಿಸುತ್ತಿದ್ದ ಅನೇಕ ಪ್ರಯಾಣಿಕರು, ನಗರ ನಿವಾಸಿಗಳು, ರಿಕ್ಷಾ ಚಾಲಕರು, ಟಾಂಗಾ ಚಾಲಕರು, ರೈಲು ಪ್ರಯಾಣಿಕರು, ಪಕ್ಕದ ಅಂಗಡಿಯವರು ಹೀಗೆ ನೂರಾರು ಜನರಿಗೆ ಮಜ್ಜಿಗೆ ವಿತರಿಸಲಾಯಿತು,

ಗದಗ ಆನ್‌ಲೈನ್‌ನ ಮನೋಜ ಕ್ರೂಜ್ ಅವರು ಬಿಸಿಲಿನ ಬೇಗೆಯಲ್ಲಿ ಓಡಾಡುತ್ತಿದ್ದ ಜನರನ್ನು ನೋಡಿದಾಗ ಮುಖ್ಯ ರಸ್ತೆಯಲ್ಲಿ ಅವರಿಗೆ ನೀರು ಸಿಗುವುದೂ ಕಷ್ಟ, ಕೇಳಿದರೂ ಯಾರೂ ಕೊಡುವುದಿಲ್ಲ ಅಲ್ಲದೇ ನೀರು ಬೇಕೆಂದರೆ ಕಿಸೆಯಿಂದ 20 ರೂ. ಕೊಡಬೇಕು ಎಂಬುದನ್ನು ಯೋಚಿಸಿ, ಇವರಿಗೆಲ್ಲ ಯಾಕೆ ತಂಪು ಮಜ್ಜಿಗೆ ಕೊಡಬಾರದು ಎಂದು ಉಚಿತ ಮಜ್ಜಿಗೆ ಸೇವೆ ಆರಂಭಿಸಿದರು. ಮೊದಲನೆಯ ದಿನವೇ ಅನೇಕ ಜನರು ಮಜ್ಜಿಗೆ ಕುಡಿದು ಗದಗ ಆನ್‌ಲೈನ್ ತಂಡಕ್ಕೆ ಧನ್ಯವಾದ ತಿಳಿಸಿದರು.

ಕನ್ನಡದ ಅಜ್ಜ ಎಂದೇ ಖ್ಯಾತಿ ಪಡೆದ ಮಲ್ಲಿಕಾರ್ಜುನ ಖಂಡೆಮ್ಮನವರ ಮಾತನಾಡಿ, ಗದಗ ಆನ್‌ಲೈನ್ ತಂಡದ ಈ ವಿಶೇಷ ಪ್ರಯತ್ನಕ್ಕೆ ಪ್ರಶಂಸೆ ವ್ಯಕ್ತಪಡಿಸಿದರು.

ಈ ವೇಳೆ ಗದಗ ಆನ್‌ಲೈನ್ ತಂಡದ ಸಂಜನಾ ಮೂಳೆ, ವಿಹಾನ್ ಕೊಪ್ಪರ್, ಪತ್ರಕರ್ತ ರಘು ಕೊಪ್ಪರ್, ಪತ್ರಕರ್ತ ಸುಯಮೀಂದ್ರ ಕುಲಕರ್ಣಿ, ಗಿರೀಶ್ ಜೋಶಿ, ಮಹಾಂತೇಶ ಮಸ್ತಮರಡಿ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

## "ವಿಐಪಿ ಸಂಸ್ಕೃತಿ ಕಾಂಗ್ರೆಸ್ ಮನಸ್ಥಿತಿಯನ್ನು ಬಹಿರಂಗಪಡಿಸಿದೆ."



■ವಿಜಯಸಾಕ್ಷಿ ಸುದ್ದಿ, ಗದಗ

ವಿಧಾನಸಭೆ ಅಧಿವೇಶನದಲ್ಲಿ ಐಪಿಎಲ್ ಪಂದ್ಯಗಳ ಉಚಿತ ಟಿಕೆಟ್ ಬೇಡಿಕೆ ಇಟ್ಟಿರುವ ಕಾಂಗ್ರೆಸ್ ಶಾಸಕರ ವಿರುದ್ಧ ಜೆಡಿಎಸ್ ಪಕ್ಷ ತೀವ್ರ ಆಕ್ರೋಶ ವ್ಯಕ್ತಪಡಿಸಿದೆ.

ಜೆಡಿಎಸ್ ಪಕ್ಷದ ರಾಜ್ಯ ವಕ್ತಾರ ವೆಂಕನಗೌಡ ಆರ್. ಗೋವಿಂದಗೌಡ್ರ ಅವರು ಈ ಬಗ್ಗೆ ಪ್ರತಿಕ್ರಿಯಿಸಿ, ಸಾರ್ವಜನಿಕರೊಂದಿಗೆ ಕುಳಿತು ಪಂದ್ಯ ವೀಕ್ಷಿಸಲು ಆಗುವುದಿಲ್ಲ ಎಂದು ಹೇಳಿ ಉಚಿತ ಟಿಕೆಟ್ ಬೇಡಿಕೆ ಇಡುವ ಮೂಲಕ ಕಾಂಗ್ರೆಸ್ ಶಾಸಕರು ಸಣ್ಣತನ ಪ್ರದರ್ಶಿಸಿದ್ದಾರೆ ಎಂದು ಆರೋಪಿಸಿದರು.

ಕಾಂಗ್ರೆಸ್ ಶಾಸಕ ಕಾಶಪ್ಪನವರ ಅವರು ಶಾಸಕರಿಗೆ ಹಾಗೂ ಅವರ ಕುಟುಂಬ ಸದಸ್ಯರಿಗೆ ಪ್ರತ್ಯೇಕ ಸ್ಟಾಂಡ್ ಮಾಡಬೇಕು ಎಂದು ಹೇಳಿರುವುದು ಕಾಂಗ್ರೆಸ್ ಪಕ್ಷದ ವಿಐಪಿ ಸಂಸ್ಕೃತಿಯನ್ನು ತೋರಿಸುತ್ತದೆ ಎಂದು ಟೀಕಿಸಿದರು.

ಸಾಮಾನ್ಯ ಜನರ ಬಳಿ ಹೋಗಿ ಮತ ಕೇಳುವವರು, ನಂತರ ಅವರೊಂದಿಗೇ ಕುಳಿತುಕೊಳ್ಳಲು ಹಿಂಜರಿಯುವುದು ಸರಿಯಲ್ಲ. ಇದು ಜನಪ್ರತಿನಿಧಿಗಳ ನಿಲುವಿಗೆ ತಕ್ಕದ್ದಲ್ಲ ಎಂದು ಅವರು ಹೇಳಿದರು.

ಶಾಸಕರಿಗೆ ಈಗಾಗಲೇ ಸಾಕಷ್ಟು ಸೌಲಭ್ಯಗಳಿದ್ದು, ತಮ್ಮ ಕುಟುಂಬದವರಿಗೆ ಐಪಿಎಲ್ ಟಿಕೆಟ್ ಖರೀದಿಸಲು ಸಾಧ್ಯವಿಲ್ಲವೇ ಎಂದು ಪ್ರಶ್ನಿಸಿದರು.

ಈ ಹಿಂದೆ ಜೆಡಿಎಸ್ ಯುವ ನಾಯಕ ನಿಖಿಲ್ ಕುಮಾರಸ್ವಾಮಿ ಕೂಡ ಉಚಿತ ಟಿಕೆಟ್ ಬೇಡಿಕೆಯನ್ನು ವಿರೋಧಿಸಿದ್ದಾರೆ ಎಂದು ಅವರು ತಿಳಿಸಿದರು.

ವಿಧಾನಸಭೆಯ ಕಲಾಪಗಳು ರೈತರು, ಯುವಕರು ಮತ್ತು ಮಹಿಳೆಯರ ಕಲ್ಯಾಣಕ್ಕಾಗಿ ಬಳಸಬೇಕಾಗಿದ್ದು, ಉಚಿತ ಟಿಕೆಟ್ ಅಥವಾ ಪ್ರತ್ಯೇಕ ಸ್ಟಾಂಡ್ ಬೇಡಿಕೆಗಳಿಗೆ ಜೆಡಿಎಸ್ ಪಕ್ಷ ವಿರೋಧವಾಗಿದೆ ಎಂದು ಗೋವಿಂದಗೌಡ್ರ ಪಕ್ಷದ ನಿಲುವನ್ನು ಸ್ಪಷ್ಟಪಡಿಸಿದರು.

### 21 ತಂಡಗಳ ಕಾದಾಟ- ಜಯಕರ್ನಾಟಕ ತಂಡಕ್ಕೆ ಪ್ರಥಮ ಸ್ಥಾನ, ಯುವಕರಿಗೆ ಕ್ರೀಡಾ ಸ್ಫೂರ್ತಿಯ ಸಂದೇಶ

# ಕ್ರೀಡೆಗಳು ಒತ್ತಡ ನಿವಾರಣೆಗೆ ದಿವ್ಯ ಔಷಧ: ಜೂಲಕಟ್ಟಿ




> "ಆಧುನಿಕ ಜೀವನದ ಒತ್ತಡ ನಿವಾರಣೆಗೆ ಕ್ರೀಡೆಗಳು ದಿವ್ಯ ಔಷಧ, ಯುವಕರು ಕ್ರೀಡಾ ಸ್ಫೂರ್ತಿಯನ್ನು ಮರೆಯಬಾರದು"
>
> **– ಎಲ್.ಕೆ ಜೂಲಕಟ್ಟಿ, ಪೊಲೀಸ್ ಇನ್ಸ್‌ಪೆಕ್ಟರ್.**

■ವಿಜಯಸಾಕ್ಷಿ ಸುದ್ದಿ, ಗದಗ

ಇತಿಹಾಸ ಪ್ರಸಿದ್ಧ ಜಗದ್ಗುರು ತೋಂಟದಾರ್ಯ ಮಠದ 2026ನೇ ಸಾಲಿನ ಜಾತ್ರಾ ಮಹೋತ್ಸವದ ಅಂಗವಾಗಿ ಆಯೋಜಿಸಲಾದ ಕಬಡ್ಡಿ ಪಂದ್ಯಾವಳಿ ಉತ್ಸಾಹಭರಿತವಾಗಿ ಜರುಗಿತು. ಒಟ್ಟು 21 ತಂಡಗಳು ಭಾಗವಹಿಸಿದ್ದ ಈ ಪಂದ್ಯಾವಳಿ ಕ್ರೀಡಾಭಿಮಾನಿಗಳ ಗಮನ ಸೆಳೆಯಿತು. ಪಂದ್ಯಾವಳಿಯನ್ನು ಉದ್ಘಾಟಿಸಿ ಮಾತನಾಡಿದ ಪೊಲೀಸ್ ಇನ್ಸ್‌ಪೆಕ್ಟರ್ ಎಲ್.ಕೆ ಜೂಲಕಟ್ಟಿ ಅವರು, ಆಧುನಿಕ ದಿನಮಾನದಲ್ಲಿ ಒತ್ತಡದ ಜೀವನಶೈಲಿಯಿಂದ ದೈಹಿಕ ಹಾಗೂ ಮಾನಸಿಕ ಆರೋಗ್ಯ ಕುಗ್ಗುತ್ತಿದೆ. ಇಂತಹ ಸಂದರ್ಭಗಳಲ್ಲಿ ಕ್ರೀಡೆಗಳು ದಿವ್ಯ ಔಷಧಿಯಂತೆ ಕೆಲಸ ಮಾಡುತ್ತವೆ ಎಂದು ಹೇಳಿದರು. ಯುವಕರು ಕ್ರೀಡೆಗಳ ಮಹತ್ವವನ್ನು ಅರಿತು, ಕ್ರೀಡಾ ಸ್ಫೂರ್ತಿಯನ್ನು ಬೆಳೆಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ತೋಂಟದಾರ್ಯ ಮಠದ ಜಾತ್ರೆಯ ಸಮಾಜಮುಖಿ ಪರಂಪರೆ ವಿಶೇಷವಾಗಿದ್ದು, ಕ್ರೀಡೆಗಳಿಗೆ ಜಾತ್ರೆಯಲ್ಲಿ ಪ್ರಾಮುಖ್ಯತೆ ನೀಡಿರುವುದು ಶ್ಲಾಘನೀಯ ಕಾರ್ಯವಾಗಿದೆ. ಸ್ಪರ್ಧಾಳುಗಳು ಗೆಲುವಿಗಿಂತ ಭಾಗವಹಿಸುವಿಕೆ ಹಾಗೂ ಕ್ರೀಡಾ ಮನೋಭಾವಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಅವರು ಸಲಹೆ ನೀಡಿದರು.

ಪಂದ್ಯಾವಳಿಯಲ್ಲಿ ಮೆಣಸಗಿಯ ಜಯಕರ್ನಾಟಕ ಕಬಡ್ಡಿ ತಂಡ ಪ್ರಥಮ ಸ್ಥಾನ ಪಡೆದುಕೊಂಡರೆ, ರೋಣದ ಬಿ.ಸಿ. ರಮೇಶ್ ತಂಡ ದ್ವಿತೀಯ ಸ್ಥಾನ ಪಡೆದು ರನ್ನರ್ ಅಪ್ ಗೌರವಕ್ಕೆ ಭಾಜನಾಯಿತು. ಡಂಬಳದ ಮಾರುತೇಶ್ವರ ಹಾಗೂ ಮೆಣಸಗಿಯ ಲಿಂಗಬಸವೇಶ್ವರ ತಂಡಗಳು ಕ್ರಮವಾಗಿ ಮೂರನೇ ಮತ್ತು ನಾಲ್ಕನೇ ಸ್ಥಾನಗಳನ್ನು ಪಡೆದವು. ವಿಜೇತ ತಂಡಗಳಿಗೆ ಪ್ರಶಸ್ತಿ ಫಲಕ ಮತ್ತು ನಗದು ಬಹುಮಾನ ನೀಡಿ ಗೌರವಿಸಲಾಯಿತು. ಪಂದ್ಯಾವಳಿಯ ನಿರ್ಣಾಯಕರಾಗಿ ಬಿ.ಎಚ್ ಹಡಪದ, ಎಸ್.ಡಿ ಮಾದರ, ಎಂ.ಆರ್ ಪೂಜಾರ, ಮುತ್ತು ಪ್ರದಾನಿ ಹಾಗೂ ಎಸ್.ಆರ್ ಗಣಾಚಾರಿ ಕಾರ್ಯನಿರ್ವಹಿಸಿದರು. ಜಾತ್ರಾ ಸಮಿತಿಯ ಅಧ್ಯಕ್ಷ ವಿನಾಯಕ ಮಾನ್ವಿ, ಉಪಾಧ್ಯಕ್ಷ ಶಿವಯ್ಯ ನಾಲ್ವತ್‌ವಾಡಮಠ, ಸುಭಾಷ ಚನ್ನಪ್ಪನವರ, ಸುಧಾ ಹುಚ್ಚಣ್ಣವರ ಸೇರಿದಂತೆ ಹಲವಾರು ಪದಾಧಿಕಾರಿಗಳು, ಭಕ್ತರು ಹಾಗೂ ಕ್ರೀಡಾಪ್ರೇಮಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಗ್ರಾಮೀಣ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಸಿಕ್ಕರೆ ಸಾಧನೆ ಖಚಿತ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗ್ರಾಮೀಣ ಭಾಗದ ಸರ್ಕಾರಿ ಶಾಲೆಗಳ ಮಕ್ಕಳು ಹೆಚ್ಚಿನ ಪ್ರತಿಭಾವಂತರಾಗಿದ್ದು, ಅವರಿಗೆ ಉತ್ತಮ ಕಲಿಕಾ ವಾತಾವರಣ ಹಾಗೂ ಸೌಲಭ್ಯ ಒದಗಿಸಿದರೆ ಉತ್ತಮ ಸಾಧನೆ ಮಾಡಬಲ್ಲರು ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಸಮೀಪದ ಕುಂದ್ರಳ್ಳಿ ತಾಂಡಾದಲ್ಲಿ ಶನಿವಾರ ಸರ್ಕಾರಿ ಪ್ರಾಥಮಿಕ ಶಾಲೆಯ ನೂತನ ಕೊಠಡಿ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ಗ್ರಾಮೀಣ ಪ್ರದೇಶಗಳಲ್ಲಿ ಶಾಲಾ ಕೊಠಡಿಗಳ ನಿರ್ಮಾಣ ಹಾಗೂ ಮೂಲಸೌಕರ್ಯಗಳನ್ನು ಒದಗಿಸಲು ಸರ್ಕಾರದಿಂದ ಹೆಚ್ಚಿನ ಅನುದಾನ ತರಲು ಪ್ರಯತ್ನಿಸುತ್ತಿದ್ದೇನೆ. ಸರ್ಕಾರಿ ಶಾಲೆಗಳಲ್ಲಿ ಉತ್ತಮ ಶಿಕ್ಷಣ ದೊರೆಯುತ್ತಿರುವುದು ಸಂತೋಷದ ಸಂಗತಿ ಎಂದು ತಿಳಿಸಿದರು.

ಈ ಬಾರಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ಪಡೆದು ತಾಲೂಕಿನ ಕೀರ್ತಿಯನ್ನು ಹೆಚ್ಚಿಸಬೇಕೆಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಈ ಸಂದರ್ಭದಲ್ಲಿ ಬಿಇಒ ನಾಣಕಿ ನಾಯ್ಕ್ ಮಾತನಾಡಿ, ಗ್ರಾಮೀಣ ಪ್ರದೇಶದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಲು ಇಲಾಖೆ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಂಡಿದೆ. ಈ ವರ್ಷ ಗದಗ ಜಿಲ್ಲೆಯು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡುವ ನಿರೀಕ್ಷೆಯಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಹೇಶ ಲಮಾಣಿ, ಮಂಜುನಾಥ ಗೌರಿ, ಈಶಪ್ಪ ಲಮಾಣಿ, ರಮೇಶ ಲಮಾಣಿ, ಮಾನು ಲಮಾಣಿ, ಮಂಜುನಾಥ ಕಳಸದ, ಸಂತೋಷ ಲಮಾಣಿ, ಎಸ್‌ಡಿಎಂಸಿ ಅಧ್ಯಕ್ಷರು ಹಾಗೂ ಸದಸ್ಯರು, ಮುಖ್ಯೋಪಾಧ್ಯಾಯರು, ಲೋಕೋಪಯೋಗಿ ಇಲಾಖೆಯ ಎಇಇ ಶಿವಪ್ರಸಾದ್ ಕಾಳಗಿ ಹಾಗೂ ಗ್ರಾಮದ ಮುಖಂಡರು ಉಪಸ್ಥಿತರಿದ್ದರು.

## ಮಹಿಳೆಯರಿಗಾಗಿ 'ಸ್ಟಾರ್ ಸುವರ್ಣ ಲೇಡೀಸ್ ಕ್ಲಬ್' ವಿನೂತನ ಅಭಿಯಾನ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಜಿಯೋ ಸ್ಟಾರ್ ಮತ್ತು ಕಲರ್ಸ್ ಕನ್ನಡ ವಾಹಿನಿಗಳ ಅಧಿಕೃತ ಈವೆಂಟ್ ಮ್ಯಾನೇಜ್‌ಮೆಂಟ್ ಸಂಸ್ಥೆಯಾದ 'ಟ್ರಿವಿಮಾ ಎಂಟರ್‌ಟೈನ್‌ಮೆಂಟ್' ವತಿಯಿಂದ ಸ್ಟಾರ್ ಸುವರ್ಣ ವಾಹಿನಿಯ ಪರವಾಗಿ ಮಹಿಳೆಯರಿಗಾಗಿ ವಿಶೇಷವಾಗಿ ರೂಪಿಸಲಾದ "ಸ್ಟಾರ್ ಸುವರ್ಣ ಲೇಡೀಸ್ ಕ್ಲಬ್" ಎಂಬ ವಿನೂತನ ಅಭಿಯಾನವನ್ನು ಮಾರ್ಚ್ 29ರಂದು ರವಿವಾರ ಮಧ್ಯಾಹ್ನ 3 ಗಂಟೆಗೆ ನಗರದ ಕೆ.ಹೆಚ್. ಪಾಟೀಲ ಕ್ರೀಡಾಂಗಣದ ಎದುರಿನ ಪಂಚಾಚಾರ್ಯ ಮಾಂಗಲ್ಯ ಮಂದಿರದಲ್ಲಿ ಆಯೋಜಿಸಲಾಗಿದೆ.

ಮಹಿಳೆಯರು ಒಂದೆಡೆ ಸೇರಿ ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ಹಾಗೂ ಮನರಂಜನಾ ಚಟುವಟಿಕೆಗಳಲ್ಲಿ ಭಾಗವಹಿಸಲು ಈ ಕಾರ್ಯಕ್ರಮ ಉತ್ತಮ ವೇದಿಕೆಯಾಗಲಿದೆ. ಮಹಿಳೆಯರ ಸೃಜನಶೀಲತೆ, ವ್ಯಕ್ತಿತ್ವ ಮತ್ತು ಸಮುದಾಯ ಮನೋಭಾವವನ್ನು ಉತ್ತೇಜಿಸುವುದು ಈ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ.

ಈ ಕಾರ್ಯಕ್ರಮವು ಕೇವಲ ಮನರಂಜನೆಗೆ ಸೀಮಿತವಾಗದೇ, ಕಲಿಕೆ ಮತ್ತು ಸಂವಾದಾತ್ಮಕ ಅನುಭವಗಳನ್ನು ಒಳಗೊಂಡಿರುತ್ತದೆ. ಮಹಿಳೆಯರು ತಮ್ಮನ್ನು ತಾವು ಅಭಿವ್ಯಕ್ತಿಸಿಕೊಳ್ಳಲು ಹಾಗೂ ಹೊಸ ಅವಕಾಶಗಳನ್ನು ಅನ್ವೇಷಿಸಲು ಇದು ಪ್ರೇರಣೆಯಾಗಲಿದೆ.


ಕಾರ್ಯಕ್ರಮದ ಪ್ರಮುಖ ಆಕರ್ಷಣೆಗಳಲ್ಲಿ ಸಾಂಸ್ಕೃತಿಕ ಪ್ರದರ್ಶನಗಳು ಪ್ರಮುಖವಾಗಿದ್ದು, ಪಾಲ್ಗೊಳ್ಳುವವರು ತಮ್ಮ ಪ್ರತಿಭೆಯನ್ನು ವಿವಿಧ ಪ್ರದರ್ಶನಗಳ ಮೂಲಕ ಹೊರಹಾಕಬಹುದು.

ಜೊತೆಗೆ ಜನಪ್ರಿಯ 'ವಸುದೇವ ಕುಟುಂಬ' ಧಾರಾವಾಹಿಯ ಆಧಾರದ ಮೇಲೆ ಸಂವಾದಾತ್ಮಕ ಪ್ರಶ್ನೋತ್ತರ (ಕ್ವಿಜ್) ಕಾರ್ಯಕ್ರಮಗಳನ್ನು ನಡೆಸಲಾಗುತ್ತದೆ.

ವಿಶೇಷವಾಗಿ "ನೋಡಿ ಮತ್ತು ಗೆಲ್ಲಿ" ಸವಾಲು ಕೂಡ ಆಯೋಜಿಸಲಾಗಿದ್ದು, ಸ್ಟಾರ್ ಸುವರ್ಣ ವಾಹಿನಿಯಲ್ಲಿ ಪ್ರಸಾರವಾಗುವ ವಾರದ ಸಂಚಿಕೆಗಳ ಆಧಾರದ ಮೇಲೆ ವಿಜೇತರನ್ನು ಆಯ್ಕೆ ಮಾಡಿ ಆಕರ್ಷಕ ಬಹುಮಾನಗಳನ್ನು ನೀಡಲಾಗುತ್ತದೆ.

ಕಾರ್ಯಕ್ರಮದ ಪ್ರಮುಖ ಕ್ಷಣಗಳು, ವಿಡಿಯೋ ತುಣುಕುಗಳು ಹಾಗೂ ಛಾಯಾಚಿತ್ರಗಳನ್ನು ಸ್ಟಾರ್ ಸುವರ್ಣದ ಅಧಿಕೃತ ಸಾಮಾಜಿಕ ಜಾಲತಾಣಗಳಲ್ಲಿ ಪ್ರಸಾರ ಮಾಡಲಾಗುತ್ತದೆ.ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರು ಭಾಗವಹಿಸುವಂತೆ ಆಯೋಜಕರು ಮನವಿ ಮಾಡಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಶುಭಾ (ಮೊ: 9606734980) ಅವರನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಇಂದು "ಮಾಸದ ಮಾತು" ಕಾರ್ಯಕ್ರಮದಲ್ಲಿ ಮಹಾವೀರ ಜಯಂತಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಮಾ. 29 ರಂದು ಭಾನುವಾರ ಸಂಜೆ 5:30ಕ್ಕೆ ಪಟ್ಟಣದ ಮಲ್ಲಾಡದ ಕಾಲೊನಿಯ ಎಲ್.ಆರ್. ಮಲಸಮುದ್ರ ಅವರ ನಿವಾಸದಲ್ಲಿ ಮಾಸದ ಮಾತು ಅವತರಣಿಕೆಯಲ್ಲಿ ಮಹಾವೀರ ಜಯಂತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಎಪಿಎಂಸಿ ವರ್ತಕರ ಸಂಘದ ಅಧ್ಯಕ್ಷ ಓಂ ಪ್ರಕಾಶ ಜೈನ್ ಕಾರ್ಯಕ್ರಮ ಉದ್ಘಾಟಿಸಲಿದ್ದು, ಕರ್ನಾಟಕ ವಿಶ್ವವಿದ್ಯಾನಿಲಯದ ಜೈನ್‌ಶಾಸ್ತ್ರ ಅಧ್ಯಯನ ಪೀಠದ ಮುಖ್ಯಸ್ಥರಾದ ಸಾಹಿತಿ ಡಾ. ಜಿನದತ್ತ ಹಡಗಲಿ ಅವರು "ಭಗವಾನ್ ಮಹಾವೀರರ ಜೀವನ ಮತ್ತು ತತ್ವಗಳ" ಮೇಲೆ ಉಪನ್ಯಾಸ ನೀಡಲಿದ್ದಾರೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ತಾಲೂಕಾ ಕಸಾಪ ಅಧ್ಯಕ್ಷ ಈಶ್ವರ ಮಡ್ಲೇರಿ ವಹಿಸಲಿದ್ದು, ಅತಿಥಿಗಳಾಗಿ ಸುರೇಂದ್ರಗೌಡ ಪಾಟೀಲ, ಎ.ಬಿ. ಪಾಟೀಲ, ಎನ್.ಓ. ಹಡಗಲಿ, ಆನಂತರಾಜ ಮಿಣಜಗಿ, ಎ.ಎಂ. ಮಠದ, ಎಲ್.ಆರ್. ಮಲಸಮುದ್ರ ಮತ್ತಿತರರು ಇರಲಿದ್ದಾರೆ.

## ಸಿಲಿಂಡರ್ ಅಭಾವ – ಸೌದೆಗೆ ಮೊರೆ ಹೋದ ಹೋಟೆಲ್ ಮಾಲಿಕರು!




■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಮಧ್ಯ ಪ್ರಾಚ್ಯದಲ್ಲಿ ನಡೆಯುತ್ತಿರುವ ಅಮೆರಿಕ, ಇಸ್ರೇಲ್ ಹಾಗೂ ಇರಾನ್ ನಡುವಿನ ಯುದ್ಧದ ಪರಿಣಾಮವಾಗಿ ಸಿಲಿಂಡರ್ ಪೂರೈಕೆ ವ್ಯತ್ಯಯಗೊಂಡಿದ್ದು, ಹಗರಿಬೊಮ್ಮನಹಳ್ಳಿ ಪಟ್ಟಣದಲ್ಲಿ ಹೋಟೆಲ್ ಉದ್ಯಮಕ್ಕೆ ತೀವ್ರ ಸಮಸ್ಯೆ ಉಂಟಾಗಿದೆ.

ಪಟ್ಟಣದ ಹೃದಯ ಭಾಗದಲ್ಲಿರುವ ವಾಲ್ಮೀಕಿ ಸರ್ಕಲ್ ಸಮೀಪದ ಪ್ರಸಿದ್ಧ ದರ್ಶನ್ ಹೋಟೆಲ್ ಮಾಲಿಕರಾದ ಎಸ್. ಎಂ. ಗಂಗಾಧರಯ್ಯ ಅವರು ಮಾತನಾಡಿ, "ಸಿಲಿಂಡರ್ ಸರಿಯಾದ ಪ್ರಮಾಣದಲ್ಲಿ ಲಭ್ಯವಾಗದೇ ಇರುವುದರಿಂದ ನಾವು ಸೌದೆ ಬಳಸಿ ಅಡುಗೆ ಮಾಡಬೇಕಾದ ಪರಿಸ್ಥಿತಿ ಬಂದಿದೆ" ಎಂದು ತಿಳಿಸಿದರು. ದರ್ಶನ್ ಹೋಟೆಲ್‌ನಲ್ಲಿ ಇಡ್ಲಿ, ಸಾಂಬಾರ್, ಪೂರಿ, ದೋಸೆ, ಉದ್ದಿನ ವಡೆ, ಮಿರ್ಚಿ, ಉಪ್ಪಿಟ್ಟು, ಅವಲಕ್ಕಿ, ಕೇಸರಿಬಾತ್, ಪಲಾವ್, ಚಿತ್ರಾನ್ನ ಸೇರಿದಂತೆ ಮಧ್ಯಾಹ್ನದ ಊಟವನ್ನೂ ಸೌದೆ ಬಳಸಿ ತಯಾರಿಸಲಾಗುತ್ತಿದೆ.

ಆದರೆ ಸೌದೆ ಒದಗಿಸುವುದು ಹಾಗೂ ಅದನ್ನು ಬಳಸಿ ಅಡುಗೆ ಮಾಡುವುದು ಸವಾಲಿನ ಕೆಲಸವಾಗಿದೆ ಎಂದು ಅವರು ಹೇಳಿದರು. ಕಮರ್ಷಿಯಲ್ ಸಿಲಿಂಡರ್ ಬಳಕೆ ಲಭ್ಯವಿಲ್ಲದ ಕಾರಣ ಸೌದೆ ಅವಲಂಬಿಸಬೇಕಾಗಿದೆ.

ಇದೇ ವೇಳೆ, ಕೆಲವು ಹೋಟೆಲ್ ಮಾಲಿಕರು ದುಬಾರಿ ದರದಲ್ಲಿ ಕಮರ್ಷಿಯಲ್ ಸಿಲಿಂಡರ್ ಖರೀದಿಸಿ, ಪ್ರತಿಯೊಂದು ತಿಂಡಿ ಪದಾರ್ಥದ ಮೇಲೂ 10ರವರೆಗೆ ದರ ಹೆಚ್ಚಿಸಿರುವುದು ಗ್ರಾಹಕರಿಗೆ ನೇರ ಹೊರೆ ಆಗುತ್ತಿದೆ.

ಸಿಲಿಂಡರ್ ಪೂರೈಕೆ ಸ್ಥಿರವಾಗುವವರೆಗೆ ಈ ಸಮಸ್ಯೆ ಮುಂದುವರಿಯುವ ಸಾಧ್ಯತೆ ಇದೆ ಎನ್ನಲಾಗಿದೆ.

### ಜ. ತೋಂಟದಾರ್ಯ ಮಹೋತ್ಸವದ ಅಂಗವಾಗಿ ರಕ್ತಾದನ ಶಿಬಿರ

# ಇಂದು ರಕ್ತದಾನ, ಉಚಿತ ಆರೋಗ್ಯ ತಪಾಸಣಾ ಶಿಬಿರ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಜ. ತೋಂಟದಾರ್ಯ ಜಾತ್ರಾ ಮಹೋತ್ಸವದ ಅಂಗವಾಗಿ ಇದೇ ಮಾ. 29 ರಂದು ಭಾನುವಾರ ಬೆಳಿಗ್ಗೆ 10.30 ಗಂಟೆಗೆ ಜ. ತೋಂಟದಾರ್ಯ ಕಲ್ಯಾಣ ಮಂಟಪದಲ್ಲಿ ರಕ್ತದಾನ ಶಿಬಿರ ಹಾಗೂ ಉಚಿತ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದೆ.

ಶಿಬಿರದಲ್ಲಿ ಸಾಮಾನ್ಯ ರೋಗ ತಜ್ಞರಾದ ಡಾ. ಸಂದೀಪ ಕವಳಿಕಾಯಿ, ಡಾ. ಮಧುಸೂಧನ ಚಿಂತಾಮಣಿ, ಹೃದಯ ತಜ್ಞರಾದ ಡಾ. ಮಂಜುನಾಥ ಹಿರೇಮಠ, ಶಸ್ತ್ರಚಿಕಿತ್ಸಕ ತಜ್ಞರಾದ ಡಾ. ಶ್ರೀಧರ ಕುರುಡಗಿ, ಡಾ. ಆದಿತ್ಯ ಗೋಡಖಿಂಡಿ, ಮೂತ್ರರೋಗ ತಜ್ಞರಾದ ಡಾ. ಶರಣು ಆಲೂರ, ಚರ್ಮರೋಗ ತಜ್ಞರಾದ ಡಾ. ವೀರೇಶ ದಾಯಣ್ಣವರ, ಡಾ. ತುಕಾರಾಮ ಸೂರಿ, ಪ್ರಸೂತಿ/ಸ್ತ್ರೀರೋಗ ತಜ್ಞರಾದ ಡಾ. ಸುನೀತಾ ಕುರುಡಗಿ, ಡಾ. ಶೃತಿ ಪಾಟೀಲ, ಎಲುಬು ಮತ್ತು ಕೀಲು ತಜ್ಞರಾದ ಡಾ. ಎಸ್.ಬಿ. ಶೆಟ್ಟರ, ಡಾ. ಪ್ರಕಾಶ ಸಂಕನೂರ, ಡಾ. ಮಹಾಂತೇಶ ಪಾಟೀಲ, ನೇತ್ರರೋಗ ತಜ್ಞರಾದ ಡಾ. ಜ್ಯೋತಿ ಪಾಟೀಲ, ಡಾ. ಲಾವಣ್ಯ, ಚಿಕ್ಕಮಕ್ಕಳ ತಜ್ಞರಾದ ಡಾ. ಜಯರಾಜ ಪಾಟೀಲ, ಡಾ. ಬಸವರಾಜ ನಿಂಬಣ್ಣವರ, ಚಿಕ್ಕಮಕ್ಕಳ ಶಸ್ತ್ರಚಿಕಿತ್ಸಕರಾದ ಡಾ. ದಾನೇಶ ದೇಸಾಯಿ, ದಂತ ವೈದ್ಯರಾದ ಡಾ. ನವೀನ ಹಿರೇಗೌಡರ, ಡಾ. ಸಿದ್ಧಾರ್ಥ ಗೌಡರ ಭಾಗವಹಿಸಲಿದ್ದಾರೆ.

ಇದೇ ವೇಳೆ ಆಯುರ್ವೇದ ಚಿಕಿತ್ಸಾ ಪದ್ಧತಿ ವೈದ್ಯರಿಂದ ಉಚಿತ ತಪಾಸಣೆಯು ನಡೆಯಲಿದ್ದು, ಸಾಮಾನ್ಯ ರೋಗ ತಜ್ಞರಾದ ಡಾ. ಎಸ್.ಎನ್. ಬೆಳವಡಿ, ಡಾ. ಆರ್.ವಿ. ಶೆಟ್ಟರ, ಡಾ. ಎಸ್.ಆರ್. ಹಿರೇಮಠ, ಶಸ್ತ್ರಚಿಕಿತ್ಸಕ ವೈದ್ಯರಾದ ಡಾ. ಎಮ್.ಡಿ. ಸಾಮುದ್ರಿ, ಡಾ. ಕುಮಾರ ಕಂಠಿಮಠ, ಡಾ. ಪ್ರಕಾಶ ರಕ್ಕಸಗಿ, ನೇತ್ರರೋಗ ತಜ್ಞರಾದ ಡಾ. ವಿ.ಎಸ್. ಆಡೂರ, ಡಾ. ಶಿವಶಂಕರ ಪೂಜಾರ, ಡಾ. ರಾಶಿನಕರ, ಚರ್ಮರೋಗ ತಜ್ಞರಾದ ಡಾ. ಅಶ್ವಿನಿ ಪತಂಗೆ, ಡಾ. ಬಸವರಾಜ ಚನ್ನಪ್ಪಗೌಡ್ರ, ಡಾ. ಎಸ್.ಜಿ. ಪಲ್ಲೆದ, ಪ್ರಸೂತಿ/ಸ್ತ್ರೀರೋಗ ತಜ್ಞರಾದ ಡಾ. ಜಯಶ್ರೀ ವಿರಕ್ತಮಠ, ಡಾ. ಸರೋಜಾ ರಾಮಣ್ಣವರ, ಡಾ. ರಾಜೇಶ್ವರಿ ಹಿರೇಮಠ, ಡಾ. ಹಸೀನಾ ಬಾವನಗರಿ, ಚಿಕ್ಕ ಮಕ್ಕಳ ತಜ್ಞರಾದ ಡಾ. ಎಸ್.ಡಿ. ಯರಗೇರಿ, ಡಾ. ಜಯಕುಮಾರ ಬ್ಯಾಳಿ, ಡಾ. ವೀರೇಶ ಅಂಗಡಿ, ಪಂಚಕರ್ಮ ವೈದ್ಯರಾದ ಡಾ. ಜಯರಾಜ ಬಸರಿಗಿಡದ, ಡಾ. ವಾಣಿ ಚವಡಿ, ಡಾ. ರವೀಂದ್ರ ಮೂಲಿಮನಿ, ಡಾ. ಐ.ಎಸ್. ಕಣವಿ, ಡಾ. ರಮೇಶ ಸರ್ವಿ ಸೇರಿದಂತೆ ಮುಂತಾದವರು ಪಾಲ್ಗೊಳ್ಳುವರು ಎಂದು ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಜಾತ್ರಾ ಮಹೋತ್ಸವ ಸಮಿತಿ, ನ್ಯಾಷನಲ್ ಇಂಟಿಗ್ರೇಟೆಡ್ ಮೆಡಿಕಲ್ ಅಸೋಸಿಯೇಷನ್ (ಎನ್‌ಐಎಮ್‌ಎ) ಗದಗ, ಪ್ರಾಚಾರ್ಯರು ಹಾಗೂ ಸಿಬ್ಬಂದಿ ವರ್ಗ ಡಿಜಿಎಮ್ ಆಯುರ್ವೇದ ಮಹಾವಿದ್ಯಾಲಯ ಮತ್ತು ಸಂಶೋಧನಾ ಕೇಂದ್ರ ಗದಗ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಶ್ರೀ ಕಾಳಿಕಾದೇವಿ ದೇವಸ್ಥಾನದಲ್ಲಿ ವಿಶ್ವರಂಗಭೂಮಿ ದಿನಾಚರಣೆ

# ಇಂದಿನ ಪ್ರಕ್ಷುಬ್ಧ ಸ್ಥಿತಿಯಲ್ಲಿ ರಂಗಭೂಮಿ ಇನ್ನಷ್ಟು ಕ್ರಿಯಾಶೀಲವಾಗಬೇಕು



> ಕರ್ನಾಟಕ ನಾಟಕ ಅಕಾಡೆಮಿ, ಬೆಂಗಳೂರು ಹಾಗೂ ಚಿನ್ಮಯ ಸಾಂಸ್ಕೃತಿಕ ಅಕಾಡೆಮಿಯವರು ನನ್ನ ರಂಗಸೇವೆ ಗುರುತಿಸಿ ಗೌರವಿಸಿರುವುದು ನನಗೆ ಇನ್ನಷ್ಟು ಸೇವೆ ಮಾಡಲು ಹೊಸ ಚೈತನ್ಯ ತಂದಿದೆ.
>
> **– ಬಸವರಾಜ ಶಿ. ಅಡವಳ್ಳಿ,** ಹಿರಿಯ ರಂಗಕಲಾವಿದರು.

■ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಹಿಂಸೆ, ಕ್ರೌರ್ಯ ಮತ್ತು ಯುದ್ಧಗಳಿಂದ ತುಂಬಿರುವ ಇಂದಿನ ಜಾಗತಿಕ ಪ್ರಕ್ಷುಬ್ಧ ಪರಿಸ್ಥಿತಿಯ ಸಂದರ್ಭದಲ್ಲಿ ಸಂವೇದನಾಶೀಲತೆ, ಮತ್ತು ಸಂಸ್ಕೃತ ಸಾಂಸ್ಕೃತಿಕ ಮನೋಭಾವವನ್ನು ಬೆಳೆಸುವ ನಿಟ್ಟಿನಲ್ಲಿ ರಂಗಭೂಮಿ ಇನ್ನಷ್ಟು ಕ್ರಿಯಾಶೀಲವಾಗಬೇಕಾಗಿದೆ ಎಂದು ಹಿರಿಯ ರಂಗಕಲಾವಿದರಾದ ಪ್ರೊ. ಮುರಲೀಧರ ಸಂಕನೂರ ಅಭಿಪ್ರಾಯಪಟ್ಟರು.

ನಗರದ ಹೊಸಪೇಟ್ ಚೌಕ್ ಓಣಿಯಲ್ಲಿರುವ ಶ್ರೀ ಕಾಳಿಕಾದೇವಿ ದೇವಸ್ಥಾನದಲ್ಲಿ ಕರ್ನಾಟಕ ನಾಟಕ ಅಕಾಡೆಮಿ, ಬೆಂಗಳೂರು ಹಾಗೂ ಚಿನ್ಮಯ ಸಾಂಸ್ಕೃತಿಕ ಅಕಾಡೆಮಿ (ರಿ), ಗದಗ ಇವುಗಳ ಸಹಯೋಗದಲ್ಲಿ ಶುಕ್ರವಾರ ಆಯೋಜಿಸಿದ್ದ ವಿಶ್ವರಂಗಭೂಮಿ ದಿನಾಚರಣೆ ಕಾರ್ಯಕ್ರಮದಲ್ಲಿ 'ಸಶಕ್ತ ಸಮಾಜ ಕಟ್ಟುವಲ್ಲಿ ರಂಗಭೂಮಿ ಪಾತ್ರ' ವಿಷಯ ಕುರಿತು ಉಪನ್ಯಾಸ ನೀಡಿ ಅವರು ಮಾತನಾಡಿದರು.

ಜಾತಿ, ಮತ, ಲಿಂಗ ತಾರತಮ್ಯ, ನ್ಯಾಯ ಹಾಗೂ ಸಾಮಾಜಿಕ ಸ್ವಾಸ್ಥ್ಯಗಳ ಕುರಿತು ಜನರಲ್ಲಿ ಅರಿವು ಮೂಡಿಸಬಲ್ಲ ಪ್ರಭಾವಿ ಮಾಧ್ಯಮಗಳಲ್ಲಿ ರಂಗಭೂಮಿ ಪ್ರಮುಖ ಸ್ಥಾನ ಹೊಂದಿದೆ. ಇಂತಹ ರಂಗ ಕಲೆಗೆ ಸರ್ಕಾರ, ಸಮಾಜ ಹೆಚ್ಚು ಪ್ರೋತ್ಸಾಹ ನೀಡಬೇಕು ಎಂದರು.

ಕಾರ್ಯಕ್ರಮ ಉದ್ಘಾಟಿಸಿದ ಗದಗ ಜಿಲ್ಲಾ ವಿಶ್ವಕರ್ಮ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ರಾಜಗೋಪಾಲ ಡಿ. ಕಡ್ಲಿಕೊಪ್ಪ ಅವರು ಮಾತನಾಡಿ, ನಾಡಿನ ರಂಗಭೂಮಿ ಕ್ಷೇತ್ರಕ್ಕೆ ಗದಗ ಜಿಲ್ಲೆಯ ಕೊಡುಗೆ ಅಪಾರವಾಗಿದೆ. ಇಂದಿನ ಪೀಳಿಗೆಯಲ್ಲಿ ರಂಗಾಸಕ್ತಿ ಕ್ಷೀಣಿಸುತ್ತಿರುವುದು ವಿಷಾದದ ಸಂಗತಿ. ಚಿನ್ಮಯ ಸಾಂಸ್ಕೃತಿಕ ಅಕಾಡೆಮಿ ಮಕ್ಕಳಲ್ಲಿ ರಂಗಾಸಕ್ತಿ ಮೂಡಿಸುವ ಕಾರ್ಯ ಮಾಡುತ್ತಿರುವುದು ಶ್ಲಾಘನೀಯ ಕಾರ್ಯ ಎಂದರು.

ಕಾರ್ಯಕ್ರಮದಲ್ಲಿ ಹಿರಿಯ ರಂಗ ಸಾಧಕ ಕಲಾವಿದರಾದ ಬಸವರಾಜ ಶಿ. ಅಡವಳ್ಳಿ ಅವರಿಗೆ ರಂಗ ಗೌರವ ಹಾಗೂ 'ಚಿನ್ಮಯ ಕಲಾಶ್ರೀ' ಪ್ರಶಸ್ತಿ ಪ್ರದಾನ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಬೆಟಗೇರಿ ಕಾಳಿಕಾದೇವಿ ದೇವಸ್ಥಾನ ಟ್ರಸ್ಟ್ ಕಮಿಟಿ ಅಧ್ಯಕ್ಷರಾದ ಶ್ರೀಧರ ಎಸ್. ಕೊಣ್ಣೂರ, ಹಿರಿಯ ರಂಗನಿರ್ದೇಶಕರಾದ ಷ'ಣೀಂದ್ರಾಚಾರ್ಯ ದ್ಯಾಮೇನಹಳ್ಳಿ, ಹಿರಿಯ ಸಾಹಿತಿ ಅಂದಾನೆಪ್ಪ ವಿಭೂತಿ, ಹಿರಿಯ ರಂಗಕಲಾವಿದರಾದ ಅಶೋಕ ಸುತಾರ, ಆರ್. ಎಚ್. ಕಬಾಡಿ, ಸುಭಾಷ ಮಳಗಿ, ಬಿ. ಎಲ್. ಪತ್ತಾರ, ಹನುಮಾನಸಿಂಗ್ ಬ್ಯಾಳಿ, ಉಜ್ವಲ್ ಕಬಾಡಿ, ಶಿವು ಭಜಂತ್ರಿ, ಗಿರೀಶ ಕಮ್ಮಾರ, ಕೊಟ್ರೇಶ ಲಕ್ಕುಂಡಿ, ಬಸವರಾಜ ಬಡಿಗೇರ, ನಾಗರಾಜ ಬಡಿಗೇರ, ಸತೀಶ ಹೊರಪೇಟೆ, ಮಹೇಶ ಕಮ್ಮಾರ, ಸುರೇಶ ಬಡಿಗೇರ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka